MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 231 | ಶನಿವಾರ : 28-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 231 | SATURDAY : 28-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ನೆರೆಯ ರಾಜ್ಯಗಳ ಮಾದರಿಯಂತೆ ರಾಜ್ಯದಲ್ಲಿ ಜೆಡಿಎಸ್ ಪಕ್ಷವನ್ನು ಬಲಪಡಿಸಿ :ದೇವೇಗೌಡ

ಯುವ ಮಾರ್ಗ ಸುದ್ದಿ



**ದೇವದುರ್ಗ, ಜೂ.27–** ಪಟ್ಟಣದ ಟಿಎಪಿಎಂಸಿ ಮೈದಾನದಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಿ ದೇವೇಗೌಡರಿಗೆ ಅಭಿನಂದನೆ, ಮೂರ್ತಿ ಉದ್ಘಾಟನೆ, ಹಾಗೂ ಸದಸ್ಯತ್ವ ಅಭಿಯಾನ ಉದ್ಘಾಟಿಸಿ ಮಾತನಾಡಿದ ಎಚ್.ಡಿ.ದೇವೇಗೌಡ ಅವರು ನೀವು ಮೂರ್ತಿ ಸ್ಥಾಪಿಸಿರುವ ಖುಷಿಗಿಂತ ನಿಮ್ಮ ಪಾಲಿನ ಸಮರ್ಪಕ ನೀರು ಹರಿಯುತ್ತಿಲ್ಲ ಎಂಬ ನೋವಿದೆ. ಸಂಘಟಿತರಾಗಿ ಹೋರಾಟ ಮಾಡಿ. ರೈತರ ವಿಷಯದಲ್ಲಿ ರಾಜಕಾರಣ ಮಾಡಲ್ಲ. ರೈತರ ಪರ ಚಿಂತನೆ, ಕಾಳಜಿಯನ್ನು ರಾಷ್ಟ್ರೀಯ ಪಕ್ಷಗಳು ಜಾತಿ ತಾರತಮ್ಯಕ್ಕೆ ಹೋಲಿಸುತ್ತವೆ ನೆರೆಯ ತಮಿಳುನಾಡು, ಕೇರಳ ಮಾದರಿಯಲ್ಲಿ ಜೆಡಿಎಸ್ ಪ್ರಾದೇಶಿಕ ಪಕ್ಷವನ್ನು ಬಲಪಡಿಸಿ. ಜೆಡಿಎಸ್ ಪಕ್ಷ ಬಹುಮತ ಇಲ್ಲದೆ ಅಧಿಕಾರಕ್ಕೆ ಬಂದಾಗ ರಾಜ್ಯ ಮತ್ತು ಕೇಂದ್ರದಲ್ಲಿ ರೈತಪರ, ಮಹಿಳೆಯರಿಗೆ ಶೇ 33 ಮೀಸಲಾತಿ ಬಿಲ್ ಮತ್ತು ಅಲ್ಪಸಂಖ್ಯಾತರಿಗೆ ಶೇ 4 ಮೀಸಲಾತಿ ಹಾಗೂ ಪರಿಶಿಷ್ಟ ವರ್ಗಕ್ಕೆ ಎಸ್ಟಿ ಮೀಸಲಾತಿ ಕಾರ್ಯಗಳು ಹಾಗಿವೆ.

ಕೇಂದ್ರ ಸಚಿವ ಕುಮಾರಸ್ವಾಮಿಗೆ ದೇವದುರ್ಗದಲ್ಲಿ ಹತ್ತಿ ಕಾರ್ಖಾನೆ ಸ್ಥಾಪಿಸಿ ರೈತರಿಗೆ ಅನುಕೂಲ ಯುವಕರಿಗೆ ಹುದ್ದೆಗೆ ಒದಗಿಸಲು ತಿಳಿಸುವೆ. ಪ್ರಧಾನಿ ಮೋದಿ ಅವರ ಗಮನಕ್ಕೂ ತರುವೆ ಎಂದರು. ಕೇಂದ್ರ ಸಚಿವ ಕುಮಾರಸ್ವಾಮಿ ಹತ್ತಿ ಕಾರ್ಖಾನೆ ಸ್ಥಾಪಿಸುವಂತೆ ಜೆಡಿಎಸ್ ಶಾಸಕರು ಕಾಂಗ್ರೆಸ್ ಪಕ್ಷಕ್ಕೆ ಬರುತ್ತಾರೆ ಎಂದು ಅಪಪ್ರಚಾರ ನಡೆಸಿದೆ. ಮೆಣಟಿಜಜಜಿಟಿಜಜದಲು ಬಿಬಿಎಂಪಿ ಗುಮಾಸ್ತರಿಗೆ ಸಂಬಳ ಕೊಡಿ ಎಂದು ರಾಜ್ಯ ಸರ್ಕಾರವನ್ನು ಟೀಕಿಸಿದರು.

ಶಾಸಕಿ ಕರೆಮ್ಮ ಜಿ ನಾಯಕ ಮಾತನಾಡಿ ಗ್ಯಾರಂಟಿ ಯೋಜನೆಗೆ ನಮ್ಮ ವಿರೋಧ ಇಲ್ಲ ಆದರೆ ಶಾಸಕರ ಹಕ್ಕುಗಳನ್ನು ಕಸಿದುಕೊಂಡಿದೆ. ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಬೇಕು. ಸರ್ಕಾರದ ಅನುದಾನ ಕೊರತೆ ಮಧ್ಯ ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಯಿಂದ ಬರುವ ಅನುದಾನದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿರುವೆ. ತಾಲ್ಲೂಕಿನ ಜನರಿಗೆ ಸಾರ್ವತ್ರಿಕ ಚುನಾವಣೆಯಲ್ಲಿ ನೀಡಿದ ಬರವಸೆ ಹೀಡೆರಿಸುವೆ.

ಯುವ ಘಟಕದ ರಾಜ್ಯ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿ ದೇವದುರ್ಗ ಜನರಲ್ಲಿರುವ ಪ್ರಜಾಪ್ರಭುತ್ವ ವ್ಯವಸ್ಥೆಯ ಜ್ಞಾನವನ್ನು ತಿಳಿಯಲು ಬಂದಿರುವೆ. ಜೆಡಿಎಸ್ ಪಕ್ಷ ಮತ್ತು ದೇವದುರ್ಗಕ್ಕೆ ಅವಿನಾಭಾವ ಸಂಬಂಧವಿದೆ. ನಮ್ಮ ಕುಟುಂಬ ರಾಜಕೀಯ ಅಧಿಕಾರದ ಆಶಗೆ ರಾಜಕಾರಣ ಮಾಡುತ್ತಿಲ್ಲ. ಜಾತ್ಯಾತೀತವಾಗಿ ರಾಜ್ಯಾದ್ಯಂತ ಪಕ್ಷವನ್ನು ಕಟ್ಟಿ ಮುಂಬರುವ ದಿನದಲ್ಲಿ ಅಧಿಕಾರಕ್ಕೆ ತರುತ್ತೇವೆ.

ಗುರುಮಿಠಕಲ್ ಶಾಸಕ ಶರಣಗೌಡ ಕಂದಕೂರು ಮಾತನಾಡಿ ದೇವದುರ್ಗದಲ್ಲಿ ಬಡತನ ನಿವಾರಣೆ ಆಗಿದೆ. ಜೆಡಿಎಸ್ ಪಕ್ಷದ ಅವಧಿಯಲ್ಲಿ ಆದ ನೀರಾವರಿ ಅಭಿವೃದ್ಧಿಯಿಂದ ರೈತರು ಆರ್ಥಿಕವಾಗಿ ಸಭಲರಾಗಿದ್ದಾರೆ. ಕೇಂದ್ರ ಸರ್ಕಾರದ ಸಹಕಾರದಿಂದ ಬೃಹತ 2ನೇ ಪುಟಕ್ಕೆ

## ಮೊಹರಂ ಹಿನ್ನೆಲೆ: ಸಾರ್ವಜನಿಕವಾಗಿ ಮೆರವಣಿಗೆ ನಡೆಸುವುದನ್ನು ನಿರ್ಬಂಧಿಸಿ ಆದೇಶ

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.27–** ಜಿಲ್ಲೆಯ ಸಿಂಧನೂರು, ಮಾನ ವಿ, ಸಿರವಾರ, ಮಸ್ಕಿ ಹಾಗೂ ದೇವದುರ್ಗ ತಾಲೂಕಿನ ಗ್ರಾಮಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಮೋಹರಂ ಹಬ್ಬವನ್ನು ಸಾವರ್ಜನಿಕವಾಗಿ ಗುಂಪು ಗುಂಪಾಗಿ ಆಚರಿಸುವುದನ್ನು ಮತ್ತು ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಲ್ಲಿ ವಿವಿಧ ತಾಲೂಕಿನ 23 ಗ್ರಾಮಗಳಲ್ಲಿ ಜೂನ್ 27ರಿಂದ ಜುಲೈ 6ರವರೆಗೆ ನಡೆಯಲಿರುವ ಮೊಹರಂ ಹಬ್ಬದ ಆಚರಣೆಯ ವೇಳೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪೊಲೀಸ್ ಬಂದೋಬಸ್ತ್ ಪರಿಣಾಮಕಾರಿಯಾಗಿ ಜಾರಿ ತರಲು ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35 (ಎ) (ಬಿ) (ಡಿ) (ಇ)ರ ಅಡಿ ಕ್ರಮ ವಹಿಸಲಾಗುತ್ತದೆ.

ಜಿಲ್ಲೆಯ ಸಿಂಧನೂರು, ಮಾನವಿ, ಸಿರವಾರ, ಮಸ್ಕಿ ಹಾಗೂ ದೇವದುರ್ಗ ತಾಲೂಕಿನ ಕೆಲವು ಗ್ರಾಮಗಳಲ್ಲಿ ಈ ಹಿಂದೆ ಮೊಹರಂ ಆಚ ರಣೆ ಸಂದರ್ಭದಲ್ಲಿ ಅಲಾಯಿ ಕುಣಿಯುವ ಕಾಲಕ್ಕೆ ಕಾಲ್ತುಳಿ ತಕ್ಕೆ ಒಳಗಾಗಿ ಕ್ಷುಲ್ಲಕ ಕಾರಣಗಳಿಂದ ಯುವಕರು ಕೈಗಳಲ್ಲಿ ಬಡಿಗೆ, ಬೆತ್ತಗಳನ್ನು ಹಿಡಿದು ಜಗಳಗಳಾಗಿ ಪ್ರಕರಣಗಳು ದಾಖಲಾಗಿರುತ್ತವೆ. 2025ನೇ ಸಾಲಿನ ಮೊಹರಂ ಹಬ್ಬದ ಹಿನ್ನೆಲೆಯಲ್ಲಿ ಈ ಗ್ರಾಮಗಳಲ್ಲಿ ಅಧಿಕಾರಿ ಸಿಬ್ಬಂದಿಯವರು ಭೇಟಿ ನೀಡಿ, ಭಾತ್ಮಿದಾರರಿಂದ ಗುಪ್ತ ಮಾಹಿತಿ ಸಂಗ್ರಹಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಗ್ರಾಮದಲ್ಲಿ ಮೊಹರಂ ಹಬ್ಬ ಆಚರಣೆ ನಡೆದಲ್ಲಿ ವಿವಿಧ ಸಮುದಾಯಗಳಯುವಕರ ಮಧ್ಯೆ

ಪುನಃ ಹಿಂದಿನ ದ್ವೇಷದಿಂದ ಒಬ್ಬರಿಗೊಬ್ಬರು ಹೊಡೆದಾಡಿ ಗ್ರಾಮದಲ್ಲಿ ಜೀವ ಹಾನಿ ಹಾಗೂ ಆಸ್ತಿ ಪಾಸ್ತಿಗೆ ಹಾನಿಯಾಗಿ ಕಾನೂನು ಸುವ್ಯವಸ್ಥೆಯು ಹದೆಗೆಡುವ ಸಂಭವ ಇರುವುದರಿಂದ ಕಾನೂನು ಸು



ವ್ಯವಸ್ಥೆ ಕಾಪಾಡುವ ಸಲುವಾಗಿ ಮುಂಜಾಗ್ರತಾ ಕ್ರಮವಾಗಿ ಈ ವರ್ಷವೂ ಕೂಡ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪು ಗುಂಪಾಗಿ ಆಚರಿಸುವುದು ಹಾಗೂ ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ನಿಷೇಧಿಸಲಾಗಿದೆ.

ಮೆರವಣಿಗೆ ನಿಷೇಧವಿರುವ ಗ್ರಾಮಗಳು: ಜಿಲ್ಲಾ ಪೊಲೀಸ್ ಅಧೀಕ್ಷಕರು ರಾಯಚೂರು ಇವರ ವರದಿನ್ವಯ ಸಿಂಧನೂರು ಪೊಲೀಸ್ ಠಾಣೆ ವ್ಯಾಪ್ತಿಯ ಗಿಣಿವಾರ, ಅರಳಹಳ್ಳಿ, ಉಪ್ಪಳ, ಗೋರೆಬಾಳ ಹಾಗೂ ಗುಂಡಾ, ತುರ್ವಿಹಾಳ ಪೊಲೀಸ್ ಠಾಣೆ ವ್ಯಾಪ್ತಿಯ ನಿಡಿಗೊಳ–ತಿಡಿಗೋಳ, ಎಲೆಕೂಡ್ಲಿಗಿ, ಚಿಕ್ಕಬೇರಿ, ಮಾನವಿ ಪೊಲೀಸ್ ಠಾಣೆಯ ವ್ಯಾಪ್ತಿಯ ನಂದಿಹಾಳ, ಜಾಗೀರ ಪನ್ನೂರು, ಜಾನೇಕಲ್ ಹಾಗೂ 2ನೇ ಪುಟಕ್ಕೆ

## ಜಿಲ್ಲಾ ಆಸ್ಪತ್ರೆ ಲಿಂಗಸುಗೂರುನಲ್ಲಿ ಸ್ಥಾಪಿಸಲು ಶರಣಗೌಡ ಬಯ್ಯಾಪೂರ ಸಿಎಂಗೆ ಮನವಿ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಜೂ.27–** ತಾಲೂಕಿಗೆ ಮಂಜೂರಾಗಿದ್ದ 200 ಬೆಡ್ ಗಳ ಜಿಲ್ಲಾ ಆಸ್ಪತ್ರೆಯನ್ನು ಸಿಂಧನೂರಿಗೆ ವರ್ಗಾವಣೆ ಮಾಡಲಾಗಿದ್ದು ಕೂಡಲೇ ಲಿಂಗಸಗೂರಿಗೆ ಮಂಜೂರಾಗಿದ್ದ ಜಿಲ್ಲಾ ಆಸ್ಪತ್ರೆ ಯನ್ನ ಲಿಂಗಸಗೂರಿನಲ್ಲಿಯೇ ಸ್ಥಾಪಿಸುವಂತೆ ವಿಧಾನ ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ ಅವರು ಲಿಂಗಸಗೂರು ತಾಲೂಕಿನ ಮುಖಂಡರೊಂದಿಗೆ ತೆರಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೆ ಮನವಿ ಸಲ್ಲಿಸಿದ್ದಾರೆ.

ಲಿಂಗಸುಗೂರು ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಗೆ ಪ್ರತಿ ನಿತ್ಯ 400 ರಿಂದ 500ಜನ ಹೊರ ರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ, ಹಾಗೂ ಒಳರೋಗಿಗಳ ನೋಂದಣಿಯಲ್ಲಿ ಪ್ರತಿ ದಿನ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗುತ್ತಿದೆ. ಇದು ನಾಲ್ಕು ಜಿಲ್ಲೆಗಳಿಗೆ ಕೇಂದ್ರ ಬಿಂದುವಾಗಿದ್ದು, ರಾಯಚೂರು, ಬಾಗಲಕೋಟ, ವಿಜಯಪುರ, ಕೊಪ್ಪಳ ಬಳ್ಳಾರಿ ಸೇರಿದಂತೆ ಸುತ್ತಮುತ್ತಲಿನ ತಾಲೂಕುಗಳಾದ ಯಾದಗಿರಿ, ಸುರಪುರ, ಹುಣಸಗಿ, ಮುದ್ದೇಬಿಹಾಳ, ನಾಲತವಾಡ, ಹುನಗುಂದ, ತಾಲೂಕುಗಳ ಸಾಕಷ್ಟು ಬಡ ಜನರು ಲಿಂಗಸುಗೂರು ಆಸ್ಪತ್ರೆಗೆ ಬಂದು ಚಿಕಿತ್ಸೆಯನ್ನು ಪಡೆಯುತ್ತಾರೆ. ಕಳೆದ ಬಜೆಟ್‌ನಲ್ಲಿ ಲಿಂಗಸುಗೂರು ಪಟ್ಟಣದಲ್ಲಿನ ಸಾರ್ವಜನಿಕ ಆಸ್ಪತ್ರೆಯನ್ನು 100 ಬೆಡ್ ಇದ್ದುದನ್ನು 200 ಬೆಡ್ ಗಳನ್ನಾಗಿ ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು 27–09–2024ರಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಘೋಷಣೆ ಮಾಡಿದ್ದು, ಅದಕ್ಕಾಗಿ 6 ಎಕರೆ ಸರಕಾರಿ ಭೂಮಿ ಕೂಡ ಮಂಜೂರಾಗಿರುತ್ತದೆ.

ಇದಕ್ಕೆ ಮುಖ್ಯ ಮಂತ್ರಿಗಳು ಸಕರಾತ್ಮಕವಾಗಿ ಸ್ಪಂದನೆ ನೀಡಿದ್ದಾರೆಂದು ಹೇಳಲಾಗುತ್ತಿದೆ.

ಈ ಸಂದರ್ಭದಲ್ಲಿ ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪೂರ, ನಗರ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಕರಡಕಲ್, ಬಸವರಾಜಗೌಡ ಗಣೇಕಲ್, ಗುಂಡಪ್ಪ ನಾಯಕ ಸರ್ಜಾಪುರ, ಸೋಮಶೇಖರ ಐದನಾಳ ಸೇರಿದಂತೆ ಇದ್ದರು.

## ನಾಡಪ್ರಭು ಕೆಂಪೇಗೌಡರ ಆದರ್ಶಗಳನ್ನು ಪಾಲನೆ ಮಾಡಲು ಬಿಇಓ ಈರಣ್ಣ ಸಲಹೆ

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.27–** ಇಂದಿನ ಪೀಳಿಗೆಯು ನಾಡಪ್ರಭು ಕೆಂಪೇಗೌಡರು ಹಾಕಿಕೊಟ್ಟಿರುವ ಹಾದಿಯಲ್ಲೇ ನಡೆದು, ಅವರ ಆದರ್ಶಗಳನ್ನು ಪಾಲನೆ ಮಾಡಬೇಕೆಂದು ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ ಅವರು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.



ಶುಕ್ರವಾರ ದಂದು ನಗರದ ಪಂಡಿತ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನಾಡಪ್ರಭು ಕೆಂಪೇಗೌಡರ ಜನ್ಮದಿನವು ಕನ್ನಡ ನಾಡಿನ ಪಾಲಿಗೆ ಒಂದು ಶುಭದಿನ. ಬೆಂಗಳೂರಿನಂಥ ಮಹಾ ನಗರಕ್ಕೆ ತಳಪಾಯ ಹಾಕಿದ ನಾಡಪ್ರಭುಗಳ ಜನ್ಮದಿನವಿದು. ಇದನ್ನು ಸರ್ಕಾರವು ವಿಜೃಂಭಣೆಯಿಂದ ಆಚರಿಸುತ್ತಿದ್ದು, ಈ ಮೂಲಕ ಬೆಂಗಳೂರಿನ ಜನಕನ್ನು ಸ್ಮರಿಸುತ್ತಿದೆ. ಈ ಮೂಲಕ, ಕೆಂಪೇಗೌಡರ ವೈಭವದ ಪರಂಪರೆಯನ್ನು ಹೊಸ ತಲೆಮಾರುಗಳಿಗೆ ವರ್ಗಾಯಿಸುವ ಕೆಲಸವೂ ಆಗುತ್ತಿದೆ ಎಂದರು. ಈ ವೇಳೆ ಉಪನ್ಯಾಸಕರಾಗಿ ರಾಯಚೂರಿನ ಹಿರಿಯ ಸಾಹಿತಿ ವೀರಹನುಮಾನ್ ಅವರು ಮಾತನಾಡಿ, ಬೆಂಗಳೂರು ಇಂದು ಬಹುದೊಡ್ಡ ಶಿಕ್ಷಣ ತಾಣವಾಗಿದೆ. 2ನೇ ಪುಟಕ್ಕೆ

## ಖರಾಬಾದಿನ್ನಿ ಗ್ರಾಮದ ನರೇಗಾ ಕೂಲಿ ಕಾರ್ಮಿಕರಿಂದ ಪ್ರತಿಭಟನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.27–**ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿನ ಗ್ರಾಮ ಪಂಚಾಯತಿ ಆವರಣದಲ್ಲಿ ಖರಾಬಾದಿನ್ನ ಗ್ರಾಮದ ನೂರಾರು ನರೇಗಾ ಕೂಲಿ ಕಾರ್ಮಿಕರು ವಿವಿಧ ಬೇಡಿಕೆ ಈಡೇರಿಕೆಗಾಗಿ ಪ್ರತಿಭಟನೆ ನಡೆಸಿದರು.

ಖರಾಬಾದಿನ್ನ ಗ್ರಾಮದ ಕೂಲಿ ಕಾರ್ಮಿಕ ಮಹಿಳೆ ಮಂಜಮ್ಮ ಮಾತನಾಡಿ ಪೋತ್ನಾಳ್ ಗ್ರಾಮ ಪಂಚಾಯಿತಿ ವತಿಯಿಂದ ಖರಾಬದಿನ್ನಿ ಗ್ರಾಮದಲ್ಲಿ ನಾಲ ಹೂಳೆತ್ತುವ ಕಾಮಗಾರಿ ಕೈಗೊಳ್ಳಲಾಗಿದೆ ಈ ಕಾಮಗಾರಿಯು ನಡೆಯುವ ಸ್ಥಳ ಗ್ರಾಮದಿಂದ ಬಹಳ ದೂರ ಇರುವುದರಿಂದ ಮಹಿಳೆಯರು, ವೃದ್ದರು.ಅಂಗವಿಕಲರು ಕೇಲಸದ ಸ್ಥಳಕ್ಕೆ ತೆರಳುವುದಕ್ಕೆ ತೊಂದರೆಯಾಗುವುದರಿಂದ ಮುಂದಿನ ದಿನಗಳಲ್ಲಿ ಗ್ರಾಮಕ್ಕೆ ಹತ್ತಿರವಿರುವ ಪ್ರದೇಶದಲ್ಲಿ ಕಾಮಗಾರಿ ಕೈಗೊಳ್ಳಿ ಗ್ರಾಮ ಪಂಚಾಯಿತಿ ಇಂದ ಬೆಳ್ಳಿಗೆ 7 ಕ್ಕೆ ಹಾಗೂ ಸಂಜೆ 4 ಕ್ಕೆ ಎರಡು ಬಾರಿ ಹಾಜಾರತಿ ಪಡೆಯುತ್ತಿರುವುದರಿಂದ ಹೆಚ್ಚಿನ ಸಮಯ 2ನೇ ಪುಟಕ್ಕೆ

## ತಾಲೂಕ ಪಂಚಾಯತಿ ಇಓ ಅಮಾನತಿಗೆ ಕರ್ನಾಟಕ ಭೀಮ್ ಸೇನೆ ಆಗ್ರಹ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.27–**ಕರ್ನಾಟಕ ಪಂಚಾಯತ್ ಅನಿಬರ್ಂದಿತ ಅನುದಾನ 2024 –2025 ನೆಯ ಸಾಲಿನ ಅನುದಾನ ಸಂಪೂರ್ಣ ದುರ್ಬಳಕೆ ತನಿಖೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಕರ್ನಾಟಕ ಭೀಮ್ ಸೇನೆ ವತಿಯಿಂದ ಧರಣಿ ಸತ್ಯಾಗ್ರಹ ಮಾಡಲಾಯಿತು.



ಪಟ್ಟಣದ ತಾಲೂಕು ಪಂಚಾಯತ ಆವರಣದಲ್ಲಿ 'ಧರಣಿ ಸತ್ಯಾಗ್ರಹ ಮಾಡಿ ತಾ ಲೂಕ ಪಂಚಾಯತ್ ಅನಿಬರ್ಂಧಿತ ಅನುದಾನ 2024 2025 ನೆಯ ಸಾಲಿನ ಅನು ದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಅಸಮರ್ಪ ಕವಾಗಿ ಮತ್ತು ತೀರಾ ಕಳಪೆ ಗುಣ ಮಟ್ಟ,ಮತ್ತು ಇನ್ನೂ ಹಲವು ಕಡೆ ಅಂದಾಜು ಪತ್ರಿಕೆಯ ಅನ್ವಯ ಕಾಮಗಾರಿಯನ್ನು ಮಾಡಿರುವುದಿಲ್ಲ. ಇದಕ್ಕೆ ಸಂಬಂಧಪಟ್ಟ ಕಿರಿಯ ಅಬಿ ಯಂತರರಾದ ವೆಂಕಟೇಶ್ ರವರನ್ನು ಕೂಡಲೇ ಅಮಾನತ್ತು ಮಾಡಬೇಕು, ಪೋತ್ನಾಳ ಗ್ರಾಮ ಪಂಚಾಯತ್ 2024 – 2025 ನೆಯ ಸಾಲಿನ ನರೇಗಾ ಮತ್ತು 15 ನೆಯ ಹಣಕಾಸು ಭಾರಿ ಬಹ್ಮಾಂಡ ಭ್ರಷ್ಟಾಚಾರವಾಗಿದ್ದು ಕೂಡಲೇ ತನಿಖೆಗೆ ಒಳಪಡಿಸಬೇಕು. ಮಾನ್ವಿ ತಾಲೂಕಿನ ಪೋತ್ನಾಳ ಗ್ರಾಮದಲ್ಲಿರುವ ವಿದ್ಯಾಭಾರತಿ ಶಾಲೆಯ ಮಾನ್ಯತೆಯನ್ನು ರದ್ದು ಪಡಿಸಬೇಕು. ಉಟಕನೂರ ಗ್ರಾಮ ಪಂಚಾಯತ್ ವ್ಯಾಪ್ತಿಯ ಜೆಜೆಎಂ ಕಾಮಗಾರಿಗಳನ್ನು ಕೂಡಲೇ ತನಿಖೆಗೆ ಒಳಪಡಿಸಬೇಕು,ತಪ್ಪಿತಸ್ಥ ಗುತ್ತಿಗೆದಾರರ ಪರವಾನಿಗೆಯನ್ನು ಕಪ್ಪು ಪಟ್ಟಿಗೆ ಸೇರಿಸಬೇಕು.ದುರ್ಬಳಕೆ ಮಾಡಿರುವ ಅನುದಾನವನ್ನು ಸರಕಾರದ ಭೋಕ್ಕಸಕ್ಕೆ ಮರುಪಾವತಿ ಮಾಡಬೇಕು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಮಾನ್ವಿ ವತಿಯಿಂದ ರಸ್ತೆ ಸೇತುವೆ ಯೋಜನೇತರ (ನಿರ್ವಹಣೆ ಅನುದಾನ) ಲೆಕ್ಕ ಶೀರ್ಷಿಕೆ 2054 ಗ್ರಾಮೀಣ ರಸ್ತೆ ಜಿಲ್ಲಾ ಪಂಚಾಯತ ಲಿಂಕ್ ಡಾಕ್ಯುಮೆಂಟ್

ರಾಜ್ಯ ಹಣಕಾಸು ಆಯೋಗದ ಜಿಲ್ಲೆ ಪಂಚಾಯತ್ ಅನಿಬರ್ಂಧಿತ ಅನುದಾನದ ಅಡಿ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿಯಲ್ಲಿ ಅವ್ಯವಹಾರ, ಕಳಪೆ ಕಾಮಗಾರಿ, 2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ನೆರೆಯ ರಾಜ್ಯಗಳ ಮಾದರಿಯಂತೆ ರಾಜ್ಯದಲ್ಲಿ ಜೆಡಿಎಸ್ ಪಕ್ಷವನ್ನು ಬಲಪಡಿಸಿ :ದೇವೇಗೌಡ

ಕೈಗಾರಿಕೆ ಸ್ಥಾಪಿಸಿ ಯುವಕರಿಗೆ ಉದ್ಯೋಗ ಒದಗಿಸುವಂತೆ ಮನವಿ ಮಾಡಿದ. ಸಿದ್ದಣ ತಾತಾ ಮುಂಡರಗಿ, ಜೆಡಿಎಸ್ ರಾಜ್ಯ ಯುವ ಘಟಕ ಅಧ್ಯಕ್ಷ ನೀಖಿಲ್ ಕುಮಾರಸ್ವಾಮಿ, ಶಿವಮೊಗ್ಗ ಗ್ರಾಮೀಣ ಶಾಸಕಿ ಶಾರದಾ ಪೂರ್ಯನಾಯ್ಕ್, ಗುರಮಠಕಲ್ ಶಾಸಕ ಶರಣಗೌಡ ಕಂದಕೂರು, ಕೋಲಾರ ಸಂಸದ ಮಲ್ಲೇಶ ಬಾಬು, ಚಿಕ್ಕನಾಯಕನಹಳ್ಳಿ ಶಾಸಕ ಹಾಗೂ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶ್ ಬಾಬು, ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ರಶ್ಮಿರಾಮೇಗೌಡ, ಮಾಜಿ ಶಾಸಕರುಗಳಾದ ರಾಜ ಮಾನವಿಯ ವೆಂಕಟಪ್ಪ ನಾಯಕ, ದೇವದುರ್ಗ ಹನುಮಂತಪ್ಪ ಆಲ್ಕೋಡ, ಬೀದರ್ ಬಂಡೆಪ್ಪ ಕಾಶಂಪುರ, ಜೆಡಿಎಸ್ ಜಿಲ್ಲಾಧ್ಯಕ್ಷ ವಿರೂಪಾಕ್ಷಪ್ಪ, ಮಹಾಂತೇಶ ಪಾಟೀಲ ಅತ್ತನೂರು, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಬುಡ್ಡನಗೌಡ ಜಾಗಟಗಲ್,

# ನಾಡಪ್ರಭು ಕೆಂಪೇಗೌಡರ ಆದರ್ಶಗಳನ್ನು ಪಾಲನೆ ಮಾಡಲು ಬಿಇಓ ಈರಣ್ಣ ಸಲಹೆ

ಸಾವಿರಾರು ಜನರ ಪಾಲಿಗೆ ಸೂರಾಗಿದೆ. ವಿದೇಶೀಯರ ಪಾಲಿಗೆ ಅಚ್ಚುಮೆಚ್ಚಿನ ಹೂಡಿಕೆ, ಕೈಗಾರಿಕೆ, ಆಡಳಿತ, ಸಂಸ್ಕೃತಿ, ಶಾಂತಿ ಸೇರಿದಂತೆ ಇತರೆ ಕ್ಷೇತ್ರದಲ್ಲಿ ಬೆಂಗಳೂರು ಹೆಸರಾಗಿದೆ ಎಂದು ಹೇಳಿದರು.

ಕೆಂಪೇಗೌಡರು ಬೆಂಗಳೂರನ್ನು ತುಂಬಾ ವೈಜ್ಞಾನಿಕವಾದ ಒಂದು ನಗರವನ್ನಾಗಿ ಬೆಳೆಸಬೇಕೆಂಬ ಮಹಾದಾಸೆ ಹೊತ್ತಿದ್ದರು. ಜನಜೀವನ ಮತ್ತು ನಾಗರಿಕತೆಗಳ ವಿಕಸನಕ್ಕೆ ನೀರಿನ ಆಸರೆ ಇರಬೇಕು. ಕೆಂಪೇಗೌಡರು ಬೆಂಗಳೂರಿನ ತುಂಬೆಲ್ಲ ಕೆರೆಗಳನ್ನು ಕಟ್ಟುತ್ತ, ಇದನ್ನು ಸಾವಿರ ಕೆರೆಗಳ ನಾಡನ್ನಾಗಿ ಮಾಡಿದರು. ಇದಕ್ಕೆ ಉದಾಹರಣೆಯಾಗಿ ಇಂದಿಗೂ ಆನೇಕ ಕೆರೆಗಳನ್ನು ನಾವು ನೋಡಬಹುದಾಗಿದೆ ಎಂದರು.ವಿದ್ಯಾರ್ಥಿಗಳಿಂದ ನೃತ್ಯ ಪ್ರದರ್ಶನ: ರಂಗಮಂದಿರದಲ್ಲಿ ನಾಡಪ್ರಭು ಕೆಂಪೇಗೌಡ ಅವರ ಜಯಂತಿ ಅಂಗವಾಗಿ ಎಂ ಜೆ ಡ್ಯಾನ್ಸ್ & ಫಿಟ್ನೆಸ್ ಅಕಾಡೆಮಿ ವತಿಯಿಂದ ಕೆಂಪೇಗೌಡರಿಗೆ ಸಂಬಂಧಿಸಿದ ಸಾಂಗ್‌ಗೆ ವಿದ್ಯಾರ್ಥಿಗಳು ನೃತ್ಯ ಮಾಡಿ ಪ್ರೇಕ್ಷಕರ ಗಮನ ಸೆಳೆದರು.ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ಮಾಡಗಿರಿ ಸೇರಿದಂತೆ ವಿವಿಧ ಕಾಲೇಜಿನ ಪ್ರಾಂಶುಪಾಲರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಮೊಹರಂ ಹಿನ್ನೆಲೆ: ಸಾರ್ವಜನಿಕವಾಗಿ ಮೆರವಣಿಗೆ ನಡೆಸುವುದನ್ನು ನಿರ್ಬಂಧಿಸಿ ಆದೇಶ

ಮದ್ಲಾಪೂರು, ಸಿರವಾರ ಪೊಲೀಸ್ ಠಾಣೆಯ ವ್ಯಾಪ್ತಿಯ ಸಿರವಾರ ಪಟ್ಟಣ, ಕಡದಿನ್ನಿ, ಬೊಮ್ಮನಾಳ. ಕವಿತಾಳ ಪೊಲೀಸ್ ಠಾಣೆಯ ವ್ಯಾಪ್ತಿಯ ಕವಿತಾಳ ಪಟ್ಟಣ, ಹಿರೆ ಬಾದರದಿನ್ನಿ, ಬಾಗಲವಾಡ, ಅಮೀನಗಡ, ಗೋಗೆಬಾಳ. ಮಸ್ಕಿ ಪೊಲೀಸ್ ಠಾಣೆಯ ವ್ಯಾಪ್ತಿಯ ತಲೇಖಾನ್. ಗಬ್ಬೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಖಾನಾಪೂರ, ಜಾಲಹಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಯ ಚಿಂಚೋಡಿ ಈ ಗ್ರಾಮಗಳಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮುಂಜಾಗ್ರತಾ ಕ್ರಮವಾಗಿ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ, ಗುಂಪು ಗುಂಪಾಗಿ ಆಚರಿಸುವುದು ಹಾಗೂ ಸಾರ್ವಜನಿಕವಾಗಿ ಮೆರವಣಿಗೆಯನ್ನು ನಿರ್ಬಂಧಿಸುವುದು ಸೂಕ್ತವೆಂದು ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ ಹೊರಡಿಸಲಾಗಿದೆ.

# ತಾಲೂಕ ಪಂಚಾಯತಿ ಇಓ ಅಮಾನತಿಗೆ ಕರ್ನಾಟಕ ಭೀಮ್ ಸೇನೆ ಆಗ್ರಹ

ಎಸಗಿದ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಶಿವಾಜಿ ಚೌಹಾಣ್ ರವನ್ನು ಕೂಡಲೇ ಸೇವೆಯಿಂದ ವಜಾಗೊಳಿಸಬೇಕು. ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಯಾದ ಮ ಹಾಲಿಂಗಪ್ಪ ರವರು ಮಾನ್ವಿಗೆ ನಿಯುಕ್ತಗೊಂಡ ದಿನಾಂಕ ದಿಂದ ಪ್ರಸಕ್ತ ವರೆಗಿನ ಅವದಿ , ಯ ಎಲ್ಲ ವಹಿವಾಟು ಸಾಗ ಣಿಕೆದಾರ ಕಡತಗಳನ್ನು ಸೂಕ್ಷ್ಮ ವಾಗಿ ಪರಿಶೀಲಿಸಿ ಜಿಲ್ಲಾ ಪಂಚಾ ಯತ್ ಮುಖ್ಯಲೆ ಕ್ಯಾಪತ್ರಾ ಧಿಕರಿಗಳನ್ನು ಒಳ ಗೊಂಡಂತೆ ತನಿಖಾ ತಂಡ ವನ್ನು ರಚನೆ ಮಾಡಿ ನಿಷ್ಪ ಕ್ಷಪಾತವಾಗಿ ತನಿಖೆ ಮಾಡು ವುದು, ಆಹಾರ ಇಲಾಖೆಯ ನಿರೀಕ್ಷಕರಾದ ದೇವರಾಜ್ ರವರನ್ನು ಕೂಡಲೇ ಸೇವೆಯಿಂದ ಅಮಾನತ್ತು ಗೊಳಿಸಲು ಸೇರಿದಂತೆ ಇತರೆ ಅನೇಕ ಬೇಡಿಕೆಗಳನ್ನು ಈಡೆ ರಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಭೀಮ್ ಸೇನೆ ತಾಲೂಕಾಧ್ಯಕ್ಷ ಸಂಗನ ಬಸವ ಹಿರೇಬಾದರದಿನ್ನಿ. ಪ್ರಧಾನ ಕಾರ್ಯದರ್ಶಿ ಕಿರಣ್ ಕು ಮಾರ್ ಉದ್ಬಾಳ, ಲಿಂಗರಾಜ್ ತಡಕಲ್ ,ಚನ್ನಬಸವ ಜಾನೇಕಲ್ ಮುಖಂಡರಾದ ನರಸಪ್ಪ ಜುಕೂರ್.ಹನುಮಂತ ಸೀಕಲ್, ಬಸವರಾಜ್ ಮಾನವಿ, ಸಿದ್ದಾರೆಡ್ಡಿ ಜಾನೇಕಲ್, ಶಿವಪ್ಪ ಬೆಟ್ಟದೂರು, ಚಂದ್ರು ನಕ್ಕುಂದಿ, ಅಂಬಣ್ಣ ಕರೆಗುಡ್ಡ, ಭೀಮನ ಗೌಡ, ಆದೇಪ್ಪ ಹಿರೇಬಾದ ರದಿನ್ನಿ.ಬಸವರಾಜ್ ಬೂದಿವಾಳ, ಹನುಮಂತ ಪ್ಯಾಂಥರ್, ಬಸವರಾಜ್ ಬಾಗಲವಾಡ,ಮಲ್ಲೇಶಪ್ಪ ಅಮರೇಶ್ವರ ಕ್ಯಾಂಪ್,ಹುಸೇನಪ್ಪ ನಂದಿಹಾಳ, ನರಸಿಂಹ ಸೀಕಲ್, ಮೌನೇಶ್ ನಕ್ಕುಂದಿ, ಮರಿಬಸವ ಊಟಕನೂರ, ಸೇರಿದಂತೆ ಇನ್ನಿತರರು ಉಪಸ್ಥಿತರಿದರು.

# ಖರಾಬಾದಿನ್ನಿ ಗ್ರಾಮದ ನರೇಗಾ ಕೂಲಿ ಕಾರ್ಮಿಕರಿಂದ ಪ್ರತಿಭಟನೆ

ಕೇಲಸದ ಸ್ಥಳದಲ್ಲಿಯೇ ಇರಬೇಕಾಗಿದೆ ಕೇಲಸದ ಸ್ಥಳದಲ್ಲಿ ಕುಡಿಯುವ ನೀರು,ನೆರಳಿನ ವ್ಯವಸ್ಥೆ ಮಾಡಿಲ್ಲ. ಕಾಮಗಾರಿಯನ್ನು ಬೇಗ ಮುಗಿಸಿಕೊಂಡು ಹೋಗುವುದಕ್ಕೆ ಸಾಧ್ಯವಾಗುತ್ತಿಲ್ಲ. ಉದ್ಯೋಗ ಖಾತ್ರಿ ನಿಯಮದಂತೆ ಶೇ50 ರಷ್ಟು ಕೇಲಸ ಮಾಡಿದರು ಕೂಡ ಶೇ 100 ರಷ್ಟು ಕೂಲಿ ಹಾಕಬೇಕು ಅದ್ದರೆ ಅಧಿಕಾರಿಗಳು ಕಡಿಮೆ ಮೋತ್ತದಲ್ಲಿ ಕೂಲಿ ಹಾಕುತ್ತಿದ್ದಾರೆ ಎಂದು ಅರೋಪಿಸಿದರು.

ಖರಾಬಾದಿನ್ನ ಗ್ರಾಮದ ಕೂಲಿ ಕಾರ್ಮಿಕರಾದ ಮಂಜಮ್ಮ, ಮಲ್ಲಮ್ಮ, ಬಸಮ್ಮ, ಶಾಂತಮ್ಮ, ಯಲ್ಲಮ್ಮ, ಸಿದ್ದಮ್ಮ, ಜಾಲಾಲಭಿ, ಶಿವಮ್ಮ, ಮೂಕಮ್ಮ, ನಾಗರಾಜ, ಅಮರೇಶ ಜೇಡಿ, ಅಯ್ಯಪ್ಪ, ಮಹಾಂತೇಶ, ಸತೀಶ, ಗಾದಿಲಿಂಗಪ್ಪ, ಹಂಪಯ್ಯ ಬಾದರ್ಲಿ ಸೇರಿದಂತೆ ನೂರಾರು ಕೂಲಿ ಕಾರ್ಮಿಕರು ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಬಸವರಾಜ ಕೂಲಿ ಕಾರ್ಮಿಕರಿಂದ ಮನವಿ ಸ್ವೀಕರಿಸಿ ಪರಿಶೀಲಿಸುವುದಾಗಿ ಬರವಸೇ ನೀಡಿದ ನಂತರ ಕೂಲಿ ಕಾರ್ಮಿಕರು ಪ್ರತಿಭಟನೆಯನ್ನು ಹಿಂಪಡೆದರು.

# ಕೆಂಪೇಗೌಡ ಜಯಂತಿ ಆಚರಣೆ

**ಕಲಬುರಗಿ,ಜೂ.27–**ಜಿಲ್ಲಾ ಪಂಚಾಯತ ಕಚೇರಿಯಲ್ಲಿ ಕೆಂಪೇಗೌಡ ಜಯಂತೋತ್ಸವ ಅಂಗವಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ರವರು ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಡಿಎಸ್ ಲಕ್ಷ್ಮಣ ಶೃಂಗೇರಿ, ಡಿಆಡಿಎ ಪಿಡಿ ಜಗದೇವಪ್ಪ ಬಿ, ಸಿಇಓ ವಿಕಾಸ ಸಜ್ಜನ, ಪಿಆಇಡಿ ಇಇ ಮಲ್ಲಿಕಾರ್ಜುನ ಅಲ್ಲಿಪುರ, ಆಡಬ್ಲ್ಯೂಎಸ್ ಇಇ ಧನರಾಜ ಲಡ್ಡೆ, ಜಿಲ್ಲಾ ಅಂಗವಿಕಲ ಅಧಿಕಾರಿ ಸಾದಿಕ್ ಹುಸೇನ, ಉಪ ನಿರ್ದೇಶಕಿ (ಯೋಜನೆ) ಮಧುಮತಿ, ಸಹಾಯಕ ಕಾರ್ಯದರ್ಶಿ ವೀರೇಂದ್ರ, ಆಡಬ್ಲ್ಯೂಎಸ್ ಎಇಇ ಗುರು ಗದ್ದಗಿಮಠ ಸೇರಿದಂತೆ ಜಿಲ್ಲಾ ಪಂಚಾಯತ್ ಅಧಿಕಾರಿಗಳು ಹಾಗು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.




# ಮಕ್ಕಳಿಗೆ ಸಂಖ್ಯಾಶಾಸ್ತ್ರದ ಕೌಶಲ್ಯಗಳನ್ನು ಬಿತ್ತಿ : ಶಿವರಾಜ ಪೂಜಾರಿ



**ಯುವ ಮಾರ್ಗ ಸುದ್ದಿ**

**ಅರಕೇರಾ,ಜೂ.27–** ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಶಾಸ್ತ್ರ ಒಂದು ಶೈಕ್ಷಣಿಕ ಪರಿಕಲ್ಪನೆಯಾಗಿದ್ದು ಓದುವುದು ಬರೆಯುವುದು ಮತ್ತು ಗಣಿತದ ಮೂಲಭೂತ ಕೌಶಲ್ಯಗಳನ್ನು ಮಕ್ಕಳಿಗೆ ಕಲಿಸುವುದರ ಮೇಲೆ ಕೇಂದ್ರಿಕರಿಸುತ್ತದೆ ಈ ಚಟುವಟಿಕೆಗಳು ಪ್ರಾಥಮಿಕ ಶಾಲಾ ಹಂತದಲ್ಲಿ ಮಕ್ಕಳಿಗೆ ಉತ್ತಮ ಬುನಾದಿಯನ್ನು ಹಾಕಲು ಸಹಾಯ ಮಾಡುತ್ತದೆ ಎಂದು ಕ್ಷೇತ್ರ ಸಮನ್ವಯ ಅಧಿಕಾರಿ ಶಿವರಾಜ ಪೂಜಾರಿ ಹೇಳಿದರು.

ಅವರು ಸ್ಥಳೀಯ ಪ್ರಾಥಮಿಕ ಶಾಲೆಯಲ್ಲಿ ಅರಕೇರಾ ಹೋಬಳಿ ಮಟ್ಟದ 3 ರಿಂದ 5 ನೇ ತರಗತಿಗಳಿಗೆ ಕನ್ನಡ ಮತ್ತು ಗಣಿತ ವಿಷಯಗಳ ಶಿಕ್ಷಕರ ಎಫ್‌ಎಲ್‌ಎನ್ ತರಬೇತಿ ಕಾರ್ಯಗಾರವನ್ನು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡುತ್ತ. ಅಕ್ಷರಗಳನ್ನು ಗುರುತಿಸುವುದು,ಪದಗಳನ್ನು ಓದುವುದು ಮತ್ತು ವಾಕ್ಯಗಳನ್ನು ಓದುವುದು, ಸರಳ ಗಣಿತದ ಸಮಸ್ಯೆಗಳನ್ನು ಪರಿಹರಿಸುವುದು ಮತ್ತು ಆಕಾರಗಳನ್ನು ಗುರುತಿಸುವುದು ಕಥೆಗಳನ್ನು ಹೇಳುವುದು ಮತ್ತು ಕೇಳುವುದು ವಿಷಯಗಳ ಬಗ್ಗೆ ಚರ್ಚಿಸುವುದು ಮತ್ತು ಪ್ರಶ್ನೆಗಳನ್ನು ಕೇಳುವುದು ಮತ್ತು ಉತ್ತರಿಸಲು ಸಹಕಾರಿಯಾಗುತ್ತದೆ ಈ ನಿಟ್ಟಿನಲ್ಲಿ ಶಿಕ್ಷಕರು ತರಬೇತಿ ಕಾರ್ಯಗಾರವನ್ನು ಸಂಪೂರ್ಣವಾಗಿ ಆಲಿಸಿ ಮಕ್ಕಳಲ್ಲಿ ಕೌಶಲ್ಯಗಳನ್ನು ಬಿತ್ತುವಲ್ಲಿ ಮುತುವರ್ಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ವಿವಿಧ ವಲಯದ ಸಂಪನ್ಮೂಲ ವ್ಯಕ್ತಿಗಳಾದ ಬಸ್ಸಯ್ಯ ಸಾತಲ್, ಬಸವರಾಜ, ಕೇಶಾಪುರ, ರಘು ಕೆ.ಎನ್, ಬಾಲಾಜಿ ನಾಯ್ಕ, ಅಜೀಂ ಪ್ರೇಮ್ ಜೀ ಫೌಂಡೇಶನ್ ಮೇಲ್ವಿಚಾರಕ ರಮೇಶ್ ಕುಲಕರ್ಣಿ ಶಾಲೆಯ ಮುಖ್ಯ ಶಿಕ್ಷಕರಾದ ಲಕ್ಷ್ಮಣ್ ರವರು ಉಪಸ್ಥಿತರಿದ್ದರು.

# ಸಂಸದ ಜಿ.ಕುಮಾರ ನಾಯಕ್ ಅವರಿಂದ ಕೇಂದ್ರ ಶಿಕ್ಷಣ ಕಾರ್ಯದರ್ಶಿಗಳ ಭೇಟಿ

**ಯುವ ಮಾರ್ಗ ಸುದ್ದಿ**

**ನವದೆಹಲಿ,ಜೂ.27–** ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಸಂಸದರಾದ ಜಿ. ಕುಮಾರ ನಾಯಕ್ ಅವರು ಶುಕ್ರವಾರ ನವದೆಹಲಿಯಲ್ಲಿ ಭಾರತ ಸರ್ಕಾರದ ಶಿಕ್ಷಣ ಇಲಾಖೆಯ ಕಾರ್ಯ ದರ್ಶಿಗಳಾದ ಸಂಜಯ್ ಕುಮಾರ್ ಐಎಎಸ್ ಅವರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ರಾಯಚೂರು ಕೇಂದ್ರೀಯ ವಿದ್ಯಾಲಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಪ್ರಮುಖವಾಗಿ, ರಾಯಚೂರು ಕೇಂದ್ರೀಯ ವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಅರ್ಹ ಮತ್ತು ಶಾಶ್ವತ ಸಿಬ್ಬಂದಿಯಿಂದ ಭರ್ತಿ ಮಾಡುವ ವಿಷಯದ ಬಗ್ಗೆ ಸಂಸದರು ಗಮನ ಸೆಳೆದರು. ಅಲ್ಲದೆ, ವರ್ಗಾವಣೆಗೊಂಡ ಸಿಬ್ಬಂದಿಯ ಸ್ಥಾನಕ್ಕೆ ಸಕಾಲಿಕವಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮತ್ತು ಬೋಧಕ ಸಿಬ್ಬಂದಿಯ ಕೊರತೆಯನ್ನು ತಪ್ಪಿಸಲು ವ್ಯವಸ್ಥಿತ ವಿಧಾನವನ್ನು ಸ್ಥಾಪಿಸುವ ಕುರಿತು ಸಮಾಲೋಚನೆ ನಡೆಸಲಾಯಿತು. ಭವಿಷ್ಯದಲ್ಲಿ ಇಂತಹ ಕುಂದುಕೊರತೆಗಳನ್ನು ಹೆಚ್ಚು ಪರಿಣಾ ಮಕಾರಿಯಾಗಿ ಮತ್ತು ತ್ವರಿತವಾಗಿ ಪರಿಹರಿಸಲು ಮೇಲ್ವಿಚಾರಣಾ ಕಾರ್ಯವಿಧಾನವನ್ನು ಬಲಪಡಿಸುವ ಕುರಿತು ಸಹ ಚರ್ಚಿಸಲಾಯಿತು. ಈ ವಿಷಯಗಳ ಕುರಿತು ಕೇಂದ್ರ ಶಿಕ್ಷಣ ಕಾರ್ಯ ದರ್ಶಿಗಳೊಂದಿಗೆ ವಿವರವಾಗಿ ಸಮಾಲೋಚನೆ ನಡೆಸಲಾಯಿತು ಎಂದು ಸಂಸದ ಜಿ.ಕುಮಾರ ನಾಯಕ್ ಅವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.



# ಬ್ಯಾಗವಾಟ್ ಗ್ರಾಮ ಪಂಚಾಯತ್ ಅಧ್ಯಕ್ಷರ ವಿರುದ್ದದ ಅವಿಶ್ವಾಸಕ್ಕೆ ಸೋಲು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.27–** ತಾಲ್ಲೂಕಿನ ಬ್ಯಾಗವಾಟ್ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅಮರಮ್ಮ ವಿರುದ್ದ ಮಂಡಿಸಲಾದ ಅವಿಶ್ವಾಸ ನಿರ್ಣಯಕ್ಕೆ ಕೋರಂ ಕೊರತೆಯಿಂದಾಗಿ ಸೋಲಾಗಿದ್ದು ಹಾಲಿ ಅಧ್ಯಕ್ಷೆ ಅಮರಮ್ಮ ಬಾಕಿ ಇರುವ 6 ತಿಂಗಳ ಅವಧಿಗೆ ಅಧ್ಯಕ್ಷರಾಗಿ ಮುಂದುವರೆಯುವುದಕ್ಕೆ ಅವಕಾಶ ದೊರೆತಂತಾಗಿದೆ.



ಬ್ಯಾಗವಾಟ ಗ್ರಾಮದ ಗ್ರಾಮ ಪಂಚಾಯಿತಿಯ ಹಾಲಿ ಅಧ್ಯಕ್ಷರಾದ ಅಮರಮ್ಮ ರವರ ವಿರುದ್ದ 12 ಗ್ರಾಮ ಪಂಚಾಯಿತಿ ಸದಸ್ಯರು ರಾಯಚೂರು ಸಹಾಯಕ ಆಯುಕ್ತರಿಗೆ ಗ್ರಾ.ಪಂ.ಅಧ್ಯಕ್ಷ ವಿರುದ್ದ ಅವಿಶ್ವಾಸ ನಿಲುವಳಿ ಮಂಡಿಸಿ ಪತ್ರ ನೀಡಿದರಿಂದ ಶುಕ್ರವಾರ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಲೆ ನೇತೃತ್ವದಲ್ಲಿ ಅವಿಶ್ವಸ ನಿಲುವಳಿಗಾಗಿ ಅವಕಾಶ ನೀಡಿ ಸಭೆ ಕರೆದ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯ ಒಟ್ಟು 16 ಸದಸ್ಯ ಬಲದಲ್ಲಿ ಸದಸ್ಯೆ ವಿದ್ಯಾಶ್ರೀ ತಮ್ಮ ಸದಸ್ಯತ್ವ ಸ್ಥಾನಕ್ಕೆ ರಾಜಿನಾಮೆ ನೀಡಿದ್ದು ಉಳಿದ 15 ಸದಸ್ಯರಲ್ಲಿ ಅವಿಶ್ವಸ ನಿರ್ಣಯ ಮಂಡಿಸಿದ ಸದಸ್ಯರಲ್ಲಿ ಯಾವೊಬ್ಬ ಸದಸ್ಯರು ಕೂಡ ನಿಗದಿತ ಸಮಯದ ಒಳಗಾಗಿ ಸಭೆಗೆ ಹಾಜರಾಗದೆ ಇದ್ದದರಿಂದ ಅಧ್ಯಕ್ಷರ ವಿರುದ್ದದ ಅವಿಶ್ವಾಸ ನಿರ್ಣಯಕ್ಕೆ ಕೊರಂ ಕೊರತೆ ಹಿನ್ನೆಲೆಯಲ್ಲಿ ಸೋಲಾಗಿರುವುದಾಗಿ ಹಾಗೂ ಹಾಲಿ ಅಧ್ಯಕ್ಷೆ ಅಮರಮ್ಮನವರೆ ಮುಂದುವರೆಯಲಿದ್ದಾರೆ ಎಂದು ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಲೆ ತಿಳಿಸಿದರು

ಬ್ಯಾಗವಾಟ ಗ್ರಾ.ಪಂ. ಪಿ.ಡಿ.ಓ. ಶಿವುಕುಮಾರ್, ತಾಲೂಕು ಪಂಚಾಯಿತಿ ವ್ಯವಸ್ಥಾಪಕ ಬಸವರಾಜ್, ಕಾರ್ಯದರ್ಶಿ ವಿಜಯಕುಮಾರ್, ಚನ್ನಬಸವ ಸೇರಿದಂತೆ ಗ್ರಾಪಂ ಸಿಬ್ಬಂದಿಗಳು ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

ಯುವ ಮಾರ್ಗ

ಶನಿವಾರ : 28–06–2025


# ಬಸವರಾಜ ಬೊಮ್ಮಾಯಿ ವಿರುದ್ಧದ ಎಫ್‌ಐಆರ್ ರದ್ದು

**ಬೆಂಗಳೂರು,ಜೂ.27–** ವಕ್ಫ್ ಆಸ್ತಿ ವಿಚಾರ ಪ್ರಚೋದನಕಾರಿ ಭಾಷಣ ಮಾಡಿದ ಆರೋಪ ಸಂಬಂಧ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮಾಯಿ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಅನ್ನು ಹೈಕೋರ್ಟ್ ರದ್ದುಗೊಳಿಸಿ ಆದೇಶ ಹೊರಡಿಸಿದೆ. ಎರಡೂ ಪ್ರಕರಣದಲ್ಲಿ ಮಾಜಿ ಸಿಎಂ ಬಸವರಾಜ ಬೊಮಾಯಿ ಅವರಿಗೆ ಕಾನೂನು ಹೋರಾಟದಲ್ಲಿ ಜಯ ಸಿಕ್ಕಂತಾಗಿದೆ.ಬಸವರಾಜ ಬೊಮಾಯಿ ಹೇಳಿದ್ದ ಹೇಳಿಕೆಯಲ್ಲಿ ಪ್ರಚೋದನಕಾರಿ ಅಂಶಗಳಿಲ್ಲವೆಂದು ಹಿರಿಯ ವಕೀಲ ಪ್ರಭುಲಿಂಗ್ ನಾವದಗಿ ವಾದ ಮಂಡಿಸಿದ್ದರು.

ವಾದ–ಪ್ರತಿವಾದ ಆಲಿಸಿದ ಹೈ ಕೋರ್ಟ್ ನ್ಯಾಯಮೂರ್ತಿ ನ್ಯಾ.ಎಸ್.ಆರ್. ಕೃಷ್ಣಕುಮಾರ್ ಅವರಿದ್ದ ಪೀಠ ಏಕಸದಸ್ಯ ಪೀಠ ಪ್ರಕರಣ ರದ್ದುಗೊಳಿಸಿ ಆದೇಶ ನೀಡಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾವೇರಿ ಜಿಲ್ಲೆಯ ಸವಣೂರು ಹಾಗೂ ಶಿಗ್ಗಾಂವಿ ಪೊಲೀಸ್ ಠಾಣೆಗಳಲ್ಲಿ 2024 ರಲ್ಲಿ ಪ್ರಕರಣಗಳು ದಾಖಲಾಗಿದ್ದವು. ಬಳಿಕ ಪ್ರಕರಣ ರದ್ದು ಕೋರಿ ಮಾಜಿ ಸಿಎಂ ಬಸವರಾಜ ಬೊಮಾಯಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ಮಾಡಿದ ಹೈಕೋರ್ಟ್ ಪ್ರಕರಣಗಳನ್ನು ರದ್ದುಗೊಳಿಸಿದೆ.

**ಏನಿದು ಪ್ರಕರಣ?**

ಈ ಹಿಂದೆ ಬೊಮಾಯಿ ಅವರು ಕೊಟ್ಟಿದ್ದ ಹೇಳಿಕೆ ಅವರನ್ನು ಸಂಕಷ್ಟಕ್ಕೆ ಸಿಲುಕಿಸುವಂತೆ ಮಾಡಿತ್ತು. ಸವಣೂರಿನಲ್ಲಿ ನಿಂತು ಎಲ್ಲೆ ಕಲ್ಲು ಎಸೆದರೂ ಅದು ಬಿದ್ದ ಜಾಗ ವಕ್ಫ್ ಆಸ್ತಿ ಎನ್ನುವಂತಾಗಿದೆ. ಭೋವಿ ಸಮಾಜದವರಿಗೆ ಮನೆ ನಿರ್ಮಾಣ ಮಾಡಬೇಕು ಎಂದು 3 ವರ್ಷಗಳ ಹಿಂದೆ ಹಣ ಬಿಡುಗಡೆ ಮಾಡಲಾಗಿದೆ. ಆದರೆ, ಆ ಜಾಗವನ್ನೂ ವಕ್ಫ್ ಆಸ್ತಿ ಎನ್ನುತ್ತಾರೆ ಎಂದು ಬಸವರಾಜ ಬೊಮಾಯಿ ಹೇಳಿಕೆ ನೀಡಿದ್ದರು. ಇದು ಪ್ರಚೋದಕಾರಿ ಮಾತು ಎಂದು ದೂರು ದಾಖಲಿಸಲಾಗಿತ್ತು.



ವಕ್ಫ್ ಬೋರ್ಡ್ ಆಸ್ತಿ ವಿವಾದ ಕರ್ನಾಟಕದಾದ್ಯಂತ ತೀವ್ರ ಸದ್ದು ಮಾಡಿತ್ತು. ರೈತರು ಮತ್ತು ದೇವಾಲಯಗಳ ಆಸ್ತಿಗಳನ್ನು ಕಬಳಿಸಿದ್ದಕ್ಕಾಗಿ ವಕ್ಫ್ ಮಂಡಳಿ ಮತ್ತು ರಾಜ್ಯ ಸರ್ಕಾರದ ವಿರುದ್ಧ 2024 ರ ನವೆಂಬರ್‌ನಲ್ಲಿ ಬಿಜೆಪಿ ಪ್ರತಿಭಟನೆ ಮಾಡಿತ್ತು. ಬಳಿಕ ಭಾರತೀಯ ನ್ಯಾಯಸಂಹಿತಾ, 2023 (ಬಿಎನ್‌ಎಸ್) ಸೆಕ್ಷನ್ 196(1)(ಎ) (ಗುಂಪುಗಳ ನಡುವೆ ದ್ವೇಷವನ್ನು ಉತ್ತೇಜಿಸುವುದು)ನಡಿ ಬಸವರಾಜ ಬೊಮಾಯಿ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ನಂತರ ಪ್ರಕರಣ ರದ್ದು ಕೋರಿ ಬೊಮಾಯಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ರಾಜಣ್ಣ ಹೇಳಿಕೆ ನಿರ್ಲಕ್ಷಿಸುವುದೇ ಸೂಕ್ತ

**ಬೆಂಗಳೂರು,ಜೂ.27–** ರಾಜಕೀಯ ಬದಲಾವಣೆಯಾಗಲಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ನೀಡಿರುವ ಹೇಳಿಕೆಯನ್ನು ನಿರ್ಲಕ್ಷಿಸುವುದು ಸೂಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವಿಧಾನಸೌಧದ ಬಳಿ ನಾಡಪ್ರಭು ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೆಪ್ಟೆಂಬರ್‌ನಲ್ಲಿ ರಾಜಕೀಯ ಬೆಳವಣಿಗೆಯಾಗಲಿದೆ ಎಂದು ರಾಜಣ್ಣ ಹೇಳಿದ್ದಾರೆ. ಆದರೆ ಇದೇ ರೀತಿಯ ಬೆಳವಣಿಗೆ ಎಂದು ಹೇಳಿಲ್ಲ. ಅದನ್ನು ಮಾಧ್ಯಮಗಳು ತಮಗೆ ಬೇಕಾದಂತೆ ಊಹೆ ಮಾಡಿಕೊಂಡು ವರದಿ ಮಾಡಿವೆ ಎಂದರು.ಕಾಂಗ್ರೆಸ್‌ನಲ್ಲಿ ಯಾವುದೇ ಆಂತರಿಕ ಬಿಕ್ಕಟ್ಟಿಲ್ಲ. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಬೆಂಗಳೂರಿಗೆ ಬರುತ್ತಿದ್ದಾರೆ. ಪಕ್ಷದಲ್ಲಿ ಸಮಸ್ಯೆ ಇದೆ ಎಂಬ ಕಾರಣಕ್ಕಾಗಿ ಅವರು ಬರುತ್ತಿದ್ದಾರೆ ಎಂಬ ವ್ಯಾಖ್ಯಾನ ಸರಿಯಲ್ಲ ಎಂದು ಹೇಳಿದರು.

ರಾಜಣ್ಣ ಅವರ ಹೇಳಿಕೆಯನ್ನು ನಿರ್ಲಕ್ಷಿಸುವುದು ಸೂಕ್ತ. ಸಣ್ಣಪುಟ್ಟ ಬದಲಾವಣೆಯಾಗಲಿದೆ ಎಂದು ಹೇಳಿರುವುದನ್ನು ಹೀಗೆಯೇ ವರದಿ ಮಾಡಬೇಕೆಂದು ಹೇಳಲು ನಾನು ಪತ್ರಕರ್ತ ಅಲ್ಲ ಎಂದರು.ಮಲೈಮಹದೇಶ್ವರ ಬೆಟ್ಟದಲ್ಲಿ 4 ಹುಲಿಗಳ ಅಸಹಜ ಸಾವಿನ ಬಗ್ಗೆ ತನಿಖೆಗೆ ಆದೇಶಿಸಲಾಗಿದೆ. ವರದಿ ಬಂದ ನಂತರ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ಕೆಂಪೇಗೌಡರ ಗುಣಗಾನ** :ನಾಡಪ್ರಭು ಕೆಂಪೇಗೌಡರು ದೂರದೃಷ್ಟಿಯುಳ್ಳ ದಕ್ಷ ಆಡಳಿತಗಾರರಾಗಿದ್ದರು. ಅವರ 516 ನೇ ಜಯಂತಿಯನ್ನು ಸರ್ಕಾರ ಆಚರಣೆ ಮಾಡುತ್ತಿದೆ. ಈ ಮೊದಲು ತಾವು ಆದಿಚುಂಚನಗಿರಿ ಸಂಸ್ಥಾನದ ಶ್ರೀ ನಿರ್ಮಲಾನಂದ ಸ್ವಾಮಿಯವರ ಜೊತೆ ಚರ್ಚಿಸಿ ಕೆಂಪೇಗೌಡರ ಜನದಿನವನ್ನು ನಿಗದಿಪಡಿಸಿದ್ದು, ಅಂದಿನಿಂದ ಜಯಂತಿ ನಿಯಮಿತವಾಗಿ ಆಚರಣೆಯಾಗುತ್ತಿದೆ ಎಂದರು.ಬೆಂಗಳೂರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಲು ಅಡಿಪಾಯ ಹಾಕಿದ್ದು ಕೆಂಪೇಗೌಡರು. ವೃತ್ತಿ ಆಧಾರಿತವಾಗಿ ಬಳೆಪೇಟೆ, ಚಿಕ್ಕಪೇಟೆ, ನಗರ್ತಪೇಟೆ ಸೇರಿದಂತೆ ಹಲವಾರು



ಪ್ರದೇಶಗಳನ್ನು ನಿರ್ಮಿಸಿದರು. ನಗರದ 4 ದಿಕ್ಕುಗಳಲ್ಲೂ ಗೋಪುರ ನಿರ್ಮಿಸಿ ಬೆಂಗಳೂರಿನ ವಿಸ್ತರಣೆಗೆ ಬುನಾದಿ ಹಾಕಿದರು ಎಂದು ಹೇಳಿದರು.

ಅಂದಿನ ದಿನಗಳ 'ಲ್ಲೆ ಬೆಂಗಳೂರಿನ ಕಲ್ಪನೆ ಹಾಗೂ ಆಡಳಿತ ದ ಬಗ್ಗೆ ಅವರಿಗೆ ದೂರದೃಷ್ಟಿ ಇತ್ತು. ಕೆಂ ಪೇಗೌಡರ ಕನಸಿನಂತೆಯೇ ನಗರವನ್ನು ಅಭಿವೃದ್ಧಿ ಪಡಿಸಲು ತಮ ಸರ್ಕಾರ ಬದ್ಧ ವಾಗಿದೆ. ಅವರ ಆಡಳಿತ ನಮಗೆ ಮಾದರಿ ಎಂದ 'ರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹಾಗೂ ಅನೇಕ ಶಾಸಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಸಾರ್ವಜನಿಕರ ಸುರಕ್ಷತೆಗಾಗಿ ಮನೆ–ಮನೆಗೆ ಬರಲಿದ್ದಾರೆ ಪೊಲೀಸರು

**ಬೆಂಗಳೂರು,ಜೂ.27–** ಸಾರ್ವಜನಿಕರ ಸುರಕ್ಷಿತವಾಗಿ ಮನೆ –ಮನೆಗೆ ಪೊಲೀಸ್ ಎಂಬ ವಿನೂತನ ಉಪಕ್ರಮವನ್ನು ಪೊಲೀಸ್ ಇಲಾಖೆ ಇಂದಿನಿಂದ ಜಾರಿಗೆ ತಂದಿದೆ. ಈ ಉಪಕ್ರಮವು ಸಮಾಜದಲ್ಲಿ ಅಪರಾಧ ತಡೆಗೆ ಸಹಕಾರಿಯಾಗುವುದಲ್ಲದೇ ಶಾಂತಿ ಮತ್ತು ಭದ್ರತೆಯ ಸ್ಥಿರತೆಯನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಸರ್ವರನ್ನು ಸಮಾನವಾಗಿ ಒಳಗೊಂಡು ಸಾರ್ವಜನಿಕರು ಈ ಕಾರ್ಯದಲ್ಲಿ ನೇರವಾಗಿ ಪಾಲ್ಗೊಳ್ಳುವಿಕೆಯನ್ನು ಖಾತರಿ ಪಡಿಸಿ, ಸಾಮಾಜಿಕ ಪಿಡುಗುಗಳ ವಿರುದ್ಧ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಲ್ಲಿ ಈ ವ್ಯವಸ್ಥೆಯು ಒಂದು ಆಶಾಕಿರಣವಾಗಿದೆ.

ಈ ಉಪಕ್ರಮದ ಮೂಲಕ ಪೊಲೀಸರ ಬಗ್ಗೆ ಇರುವ ಭಯದ ಭಾವದ ಬದಲು ವಿಶ್ವಾಸದ ಚಿಹ್ನೆಯಾಗಿ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗುತ್ತದೆ. ಇಂದು ನಡೆದ ಹಿರಿಯ ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮಾವೇಶದಲ್ಲಿ ಸಾರ್ವಜನಿಕರ ಸುರಕ್ಷತೆಗಾಗಿ ಪೊಲೀಸ್ ಇಲಾಖೆಯು ಜಾರಿಗೆ ತಂದಿರುವ ಮನೆ–ಮನೆಗೆ ಪೊಲೀಸ್ ಉಪಕ್ರಮದ ಕಿರುಹೊತ್ತಿಗೆಯನ್ನು ಬಿಡುಗಡೆ ಮಾಡಲಾಯಿತು. ಆಧುನಿಕ ಯುಗದಲ್ಲಿ ಪೊಲೀಸರ ಪಾತ್ರವು ಬಹುಮುಖ್ಯವಾಗಿದೆ. ಕೇವಲ ಕಾನೂನು ಮತ್ತು ಸುವ್ಯವಸ್ಥೆ ಕಾಯ್ದುಕೊಳ್ಳುವವರಾಗಿ ಮಾತ್ರವಲ್ಲದೇ, ಸಮಾಜದ ಶಾಂತಿ ಮತ್ತು ಭದ್ರತೆಯ ರೂವಾರಿಗಳಾಗಿದ್ದಾರೆ.

ಅಪರಾಧಗಳ ತಡೆ, ಅಪರಾಧ ಪ್ರಕರಣಗಳ ತನಿಖೆ, ಸಾರ್ವಜನಿಕ ಸಮಾರಂಭಗಳಲ್ಲಿ ಭದ್ರತೆ ಏರ್ಪಡಿಸುವುದು, ಪ್ರವಾಹ, ಭೂಕಂಪ, ಮಹಾಮಾರಿ ಮುಂತಾದ ವಿಪತ್ತು ಸಂದರ್ಭಗಳಲ್ಲಿ ರಕ್ಷಣಾತ್ಮಕ ಕಾರ್ಯಗಳಲ್ಲಿ ತೊಡಗುವುದು ಪೊಲೀಸ್ ಇಲಾಖೆಯ ಪ್ರಮುಖ ಕರ್ತವ್ಯಗಳಾಗಿವೆ. ಕ್ಲಿಷ್ಟ ಪರಿಸ್ಥಿತಿಗಳಲ್ಲಿ ಶಾಂತಿಯುತವಾಗಿ ನಿಭಾಯಿಸುವ ಮೂಲಕ ಪೊಲೀಸರು ಸಾರ್ವಜನಿಕರಲ್ಲಿ ಭದ್ರತೆ ಮತ್ತು ವಿಶ್ವಾಸವನ್ನು ಉಂಟುಮಾಡುವುದು ಇಲಾಖೆಯ ಆಧ್ಯತೆಯಾಗಿದೆ. ಸಾರ್ವಜನಿಕರಲ್ಲಿ ಕಾನೂನುಗಳ ಬಗ್ಗೆ ತಿಳುವಳಿಕೆ ಬೆಳೆಸುವುದು ಮತ್ತು ಪೌರ ಸಹಭಾಗಿತ್ವದ ಕಾರ್ಯಕ್ರಮಗಳನ್ನು ರೂಪಿಸುವಲ್ಲಿ ಇಲಾಖೆಯು ಪ್ರಗತಿಪರ ನಿಲುವುಗಳನ್ನು ತೆಗೆದುಕೊಳ್ಳುತ್ತಿದೆ.ಆಧುನಿಕ ತಂತ್ರಜ್ಞಾನಗಳ ಬಳಕೆಯಿಂದ ಪೊಲೀಸ್ ಇಲಾಖೆಯು ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕ ಸೇವಾ ದಿಟ್ಟ ನೋಟದೊಂದಿಗೆ ತನ್ನ ಕಾರ್ಯವ್ಯಾಪ್ತಿಯನ್ನು ವಿಸ್ತರಿಸುತ್ತಿದೆ.

ಕಾನೂನು ಜಾಗೃತಿ:ಶಾಲಾ–ಕಾಲೇಜುಗಳಲ್ಲಿ ಕಾನೂನು ಜಾಗೃತಿ ಕಾರ್ಯಕ್ರಮಗಳು, ಮಹಿಳಾ ಭದ್ರತೆ ಕುರಿತ ಕಾರ್ಯಾಗಾರಗಳು ಮತ್ತು ಯುವ ಜನರಿಗೆ ಪೊಲೀಸ್ ಸೇವೆಗಳ ಬಗ್ಗೆ ಅರಿವು ಮೂಡಿಸುವ ಸಭೆಗಳನ್ನು ಏರ್ಪಡಿಸಲಾಗುತ್ತದೆ. ಉಪಕ್ರಮದ ಪ್ರಯೋಜನ: ಅಪರಾಧ ತಡೆಗೆ ಸಹಕಾರಿ –ಸಾರ್ವಜನಿಕರ ಸಹಕಾರದಿಂದ ಪೊಲೀಸರು ಶಂಕಾಸ್ಪದ ಚಟುವಟಿಕೆಗಳನ್ನು ಬೇಗ ಗುರುತಿಸಿ ತಡೆಗಟ್ಟುವುದು. ಜನರಲ್ಲಿ ನಂಬಿಕೆ ಬೆಳೆಸುವುದು–ಸಮುದಾಯ ಪೊಲೀಸ್ ವ್ಯವಸ್ಥೆಯು ಪೊಲೀಸ್ ಮತ್ತು ಸಾರ್ವಜನಿಕರ ನಡುವೆ ವಿಶ್ವಾಸದ ಸಂಬಂಧವನ್ನು ನಿರ್ಮಿಸುವುದು. ಯುವಜನತೆಗೆ ಮಾರ್ಗದರ್ಶನ–ಯುವ ಜನರನ್ನು ಸಕಾರಾತ್ಮಕ ಚಟುವಟಿಗಳತ್ತ ತೊಡಗಿಸಲು ಇದು ಸಹಾಯ ಮಾಡುತ್ತದೆ. ಒಟ್ಟಾರೆ ಸಮಾಜದಲ್ಲಿ ಗಂಭೀರ ಸಮಸ್ಯೆ ಉದ್ಭವಿಸುವ ಮೊದಲೇ ಪರಿಹಾರೋಪಾಯಗೊಂದಿಗೆ ಸನ್ನದ್ಧರಾಗಿರುವಂತಹ ವಾತಾವರಣ ರೂಪುಗೊಂಡಿರುತ್ತದೆ.

**ಸೈಬರ್ ಅಪರಾಧದಲ್ಲಿ ಅಕ್ರಮ ಹಣ ವರ್ಗಾವಣೆಗೆ ನಕಲಿ ಬ್ಯಾಂಕ್ ಖಾತೆಗಳ ಬಳಕೆ** : ರಾಜ್ಯ ಪೊಲೀಸ್ ಇಲಾಖೆಯಿಂದ ಅಧ್ಯಯನ ವರದಿ ಬಿಡುಗಡೆ ಸೈಬರ್ ಅಪರಾಧಗಳಲ್ಲಿ ಅಕ್ರಮ ಹಣ ವರ್ಗಾವಣೆಗೆ ನಕಲಿ ಬ್ಯಾಂಕ್ ಖಾತೆಗಳ ಬಳಕೆಯ ಬಗ್ಗೆ ರಾಜ್ಯ ಪೊಲೀಸ್ ಇಲಾಖೆ ಅಧ್ಯಯನ ವರದಿಯನ್ನು ಬಿಡುಗಡೆ ಮಾಡಿದೆ.ಸೆಬರ್ ಅಪರಾಧ ಪ್ರಕರಣಗಳಲ್ಲಿ ಅಕ್ರಮ ಹಣದ ವರ್ಗಾವಣೆಗೆ ವ್ಯಾಪಕವಾಗಿ ನಕಲಿ ಬ್ಯಾಂಕ್ ಖಾತೆಗಳ ಬಳಕೆಯ ಬಗ್ಗೆ ಅಧ್ಯಯನ ಮಾಡಿ ಅವುಗಳನ್ನು ತಡೆಗಟ್ಟಲು ಅನುಸರಿಸಬೇಕಾದ ಕ್ರಮಗಳನ್ನು ಶಿಣಟಿಜಜಜಿಟಿಜಜರಸ್ಸು ಮಾಡಲು ಸಿಐಡಿಯ ಸೆಬರ್ ಅಪರಾಧ ತನಿಖಾ ತರಭೇತಿ ಮತ್ತು ಸಂಶೋಧನಾ ಕೇಂದ್ರ (ಸಿಸಿಐಆರ್‌ಟಿ) ವತಿಯಿಂದ ವಿಶೇಷ ತಂಡವನ್ನು ರಚಿಸಲಾಯಿತು.

ಈ ತಂಡದಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳು, ತನಿಖಾಧಿಕಾರಿಗಳು, ಡೇಟಾ ಸೆಕ್ಯೂರಿಟಿ ಕೌನ್ಸಿಲ್ ಇಂಡಿಯಾ (ಡಿಎಸ್‌ಸಿಐ)ತಜ್ಞರು, ಬ್ಯಾಂಕಿಂಗ್ ವಲಯದ



ಪ್ರತಿನಿಗಳು ಒಳಗೊಂಡಿದ್ದರು.ಈ ಅಧ್ಯಯನದಲ್ಲಿ ಕಳೆದ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಎನ್‌ಸಿಆರ್‌ಪಿ ಪೋರ್ಟಲ್‌ನಲ್ಲಿ ಸ್ವಿಕರಿಸಲಾದ ದೂರುಗಳನ್ನು ಹಾಗೂ ನಗರದಲ್ಲಿ ದಾಖಲಾದ ಸೈಬರ್ ಅಪರಾಧ ಪ್ರಕರಣಗಳ ಮಾಹಿತಿಯನ್ನು ಕ್ರೊಡೀಕರಿಸಿ ವಿಶ್ಲೆ?ಷಣೆ ಮಾಡಲಾಗಿದೆ. ಅಲ್ಲದೇ ಪೊಲೀಸ್ ಅಧಿಕಾರಿಗಳು, ತಂತ್ರಜ್ಞರು, ಬ್ಯಾಂಕಿಂಗ್ ವಲಯದ ಪ್ರತಿನಿಗಳು ಹಾಗೂ ತನಿಖಾಧಿಕಾರಿಗಳೊಂದಿಗೆ ಹಲವು ಸುತ್ತಿನ ಚರ್ಚೆ ಮಾಡಲಾಗಿದೆ.ಈ ಅಧ್ಯಯನ ವರದಿಯಲ್ಲಿ, ಭಾರತದಲ್ಲಿ ನಕಲಿ ಖಾತೆಗಳ ನಿಯಂತ್ರಣಕ್ಕೆ ಅನುಸರಿಸಬೇಕಾದ ಕ್ರಮಗಳನ್ನು ಶಿಣಟಿಜಜಜಿಟಿಜಜರಸ್ಸು ಮಾಡಿದ್ದು, ಈ ಕ್ರಮಗಳನ್ನು ಮೂರು ವರ್ಗಗಳಲ್ಲಿ ವಿವರಿಸಲಾಗಿದೆ.ಅವುಗಳೆಂದರೆ, ಬ್ಯಾಂಕ್‌ಗಳು ಹಾಗೂ ಇತರೆ ಹಣಕಾಸು ಸಂಸ್ಥೆಗಳು ಅನುಸರಿಸಬೇಕಾದ ಕ್ರಮಗಳು, ಪೊಲೀಸ್ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳು ಅನುಸರಿಸಬೇಕಾದ ಕ್ರಮಗಳು ಹಾಗೂ ಸರ್ಕಾರ ಮತ್ತು ನಿಯಂತ್ರಕರು ಕೈಗೊಳ್ಳಬಹುದಾದ ಕ್ರಮಗಳು.

ಈ ಅಧ್ಯಯನ ವರದಿಯನ್ನು ಕೇಂದ್ರ ಸರ್ಕಾರ , ಇತರ ಕಾನೂನು ಜಾರಿ ಸಂಸ್ಥೆಗಳು, ವಿವಿಧ ಬ್ಯಾಂಕ್‌ಗಳು ಹಾಗೂ ಇತರೆ ಹಣಕಾಸು ಸಂಸ್ಥೆಗಳೊಂದಿಗೆ ಹಂಚಿಕೊಳ್ಳುವ ಉದ್ದೇಶವಿದ್ದು, ಇದು ಸೈಬರ್ ಅಪರಾಧಗಳನ್ನು ರಾಷ್ಟ್ರಮಟ್ಟದಲ್ಲಿ ನಿಯಂತ್ರಿಸುವಲ್ಲಿ ಸಹಕಾರಿಯಾಗುವ ಆಶಯವಿದೆ.

# ಕಾಂಗ್ರೆಸ್ ವಿದ್ಯಮಾನ ನನಗೆ ಗೊತ್ತಿಲ್ಲ

**ಬೆಂಗಳೂರು:ಜೂ.27–** ಕಾಂಗ್ರೆಸ್ ಪಕ್ಷದಲ್ಲಿ ಏನು ನಡೆಯುತ್ತಿದೆಯೋ ನನಗೆ ಗೊತ್ತಿಲ್ಲ. ಆದರೆ, ಕ್ರಾಂತಿ ಆಗುತ್ತಾ ಮುಖ್ಯಮಂತ್ರಿಗಳ ಆಪ್ತರೇ ಹೇಳಿದ್ದಾರೆ. ಅದನ್ನಷ್ಟೇ ಮಾಧ್ಯಮಗಳಲ್ಲಿ ಗಮನಿಸಿದ್ದೇನೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದ್ದಾರೆ.



ಬೆಂಗಳೂರಿನ ತಮ್ಮ ನಿವಾಸದ ಬಳಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿ, ಸಚಿವ ಕೆ.ಎನ್.ರಾಜಣ್ಣ ಅವರು ಸೆಪ್ಟೆಂಬರ್ ತಿಂಗಳಲ್ಲಿ ಬದಲಾವಣೆ ಆಗುತ್ತದೆ, ಕ್ರಾಂತಿ ನಡೆಯುತ್ತದೆ ಎಂದು ಹೇಳಿದ್ದಾರೆ. ಅದು ಕ್ರಾಂತಿಯೋ ಏನೋ ನನಗೆ ಗೊತ್ತಿಲ್ಲ. ಅದು ಏನು ಎಂಬುದನ್ನು ರಾಜಣ್ಣ ಅಥವಾ ಸಿಎಂ ಅವರೇ ಹೇಳಬೇಕು. ಅವರ ಪಕ್ಷದ ಬೆಳವಣಿಗೆ ಬಗ್ಗೆ ನನಗೆ ಹೇಗೆ ಗೊತ್ತಾಗಲಿದೆ ಎಂದರು.ಮಲೆಮಹದೇಶ್ವರ ಬೆಟ್ಟದಲ್ಲಿ ಐದು ಹುಲಿಗಳ ಸಾವಿನ ಬಗ್ಗೆ ಕಳವಳ ವ್ಯಕ್ತಪಡಿಸಿ ಕುಮಾರಸ್ವಾಮಿ ಅವರು, ಇಂಥ ಧಾರುಣ ಘಟನೆ ನಡೆಯಬಾರದಿತ್ತು. ಇದು ರಾಜ್ಯಕ್ಕೆ ಕಪ್ಪುಚುಕ್ಕೆ. ಹುಲಿಗಳ ಯಾವ ಕಾರಣಕ್ಕೆ ಸತ್ತಿವೆ ಎಂಬ ಮಾಹಿತಿ ಇಲ್ಲ. ಈ ಬಗ್ಗೆ ವಿಸ್ತೃತ ತನಿಖೆ ಆಗಿ ಏನಾಗಿದೆ ಎನ್ನುವ ಮಾಹಿತಿ ಹೊರ ಬರಲಿ ಎಂದು ಹೇಳಿದರು.

ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರ ಭೇಟಿ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ ಅವರು; ದೆಹಲಿಯ ನನ್ನ ಮನೆಗೆ ಅಶೋಕ್ ಬಂದಿದ್ದರು.ನಾವು ಅವರು ಅಣ್ಣತಮ್ಮಂದಿರು. ರಾಜಕೀಯವಾಗಿ ಯಾವುದೇ ಚರ್ಚೆಯಾಗಿಲ್ಲ. ದೆಹಲಿಯಲ್ಲಿ ಹೊಸದಾಗಿ ಸರ್ಕಾರಿ ನಿವಾಸಕ್ಕೆ ನಾನು ಸ್ಥಳಾಂತರಗೊಂಡಿದ್ದೇನೆ. ಮೊದಲ ಬಾರಿಗೆ ಅವರು ಬಂದಿದ್ದರು. ಆದರೆ, ಬಿಜೆಪಿ ರಾಜ್ಯಾಧ್ಯಕ್ಷರ ವಿಷಯ ನನಗೇನೂ ಗೊತ್ತಿಲ್ಲ ಎಂದರು.

**ಕೆಂಪೇಗೌಡ ಜಯಂತಿ ಶುಭಾಶಯ:**ರಾಜ್ಯದ ಜನತೆಗೆ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು; ರಾಜ್ಯದ ಜನರಿಗೆ ನಾಡಪ್ರಭು ಕೆಂಪೇಗೌಡ ಜಯಂತಿಯ ಶುಭ ಕೋರಿದರು.ನಾಡಪ್ರಭುಗಳು ಬೆಂಗಳೂರಿನ ನಿರ್ಮಾತೃ ಮತ್ತು ಅಪ್ರತಿಮ ಆಡಳಿತಗಾರರಷ್ಟೇ ಆಗಿರಲಿಲ್ಲ, ಅವರೊಬ್ಬರು ಅನನ್ಯ ದಾರ್ಶನಿಕರು, ಶಾಂತಿಪ್ರಿಯರು, ಸರ್ವಜನರ ಶ್ರೇಯಸ್ಸಿಗಾಗಿ ದುಡಿದ ಮಹಾನ್ ಮಾನವತಾವಾದಿ ಎಂಬುದನ್ನು ಅನುಕ್ಷಣವೂ ಸ್ಮರಿಸೋಣ ಎಂದಿದ್ದಾರೆ ಅವರು.

ಅಭಿವೃದ್ಧಿ, ನೆಮ್ಮದಿ, ಸೌಹಾರ್ದತೆ, ನಗರಾಭಿವೃದ್ಧಿ, ನೀರಾವರಿ, ಕೃಷಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ನಾಡಪ್ರಭುಗಳು ಹಾಕಿಕೊಟ್ಟ ದೂರದೃಷ್ಟಿಯ ಹಾದಿ ನಮಗೆಲ್ಲರಿಗೂ ಮಾದರಿ, ಪ್ರೇರಣೆ.ವಿಜ್ಞಾನ, ತಂತ್ರಜ್ಞಾನ, ಅವಿಷ್ಕಾರ, ಕೈಗಾರಿಕೆ, ಉದ್ಯೋಗಾವಕಾಶ ಸೇರಿ ಅನೇಕ ರೀತಿಯಲ್ಲಿ ಜಗತ್ತಿನ ಮುಂಚೂಣಿ ನಗರವಾಗಿರುವ ಬೆಂಗಳೂರಿನ ಭವ್ಯ ಪರಂಪರೆಯನ್ನು ಮುಂದುವರಿಸೋಣ ಎಂದು ಸಚಿವರು ಹೇಳಿದ್ದಾರೆ.

# ಆಂತರಿಕ ಜಗಳವಿಲ್ಲ

**ಬೆಂಗಳೂರು, ಜೂ. 27–** ಕಾಂಗ್ರೆಸ್ ಪಕ್ಷದಲ್ಲಿ ಆಂತರಿಕ ಕದನ, ಒಳ ಜಗಳ ನಡೆದಿದೆ ಎಂಬ ವರದಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತಳ್ಳಿ ಹಾಕಿದ್ದಾರೆ.

ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಜಯಂತಿ ಅಂಗವಾಗಿ ವಿಧಾನಸೌಧದ ಮುಂಭಾಗದಲ್ಲಿರುವ ಕೆಂಪೇಗೌಡರ ಪ್ರತಿಮೆಗ ಮಾಲಾರ್ಪಣೆ ಮಾಡಿ, ಪುಷ್ಪನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದಲ್ಲಿ ಆಂತರಿಕ ಜಗಳವಿಲ್ಲ . ಎಲ್ಲಿದೆ ಜಗಳ ತೋರಿಸಿ ಎಂದು ಮಾಧ್ಯಮದವರನ್ನೇ ಪ್ರಶ್ನಿಸಿದರು.

ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರು ಸೆಪ್ಟೆಂಬರ್‌ನಲ್ಲಿ ರಾಜ್ಯದಲ್ಲಿ ರಾಜಕೀಯ ಕ್ರಾಂತಿ ಆಗುತ್ತದೆ ಎಂದು ಹೇಳಿದ್ದಾರಲ್ಲ ಎಂಬ ಪ್ರಶ್ನೆಗೆ, ಸಚಿವ ರಾಜಣ್ಣ ಅವರು ರಾಜ್ಯ ರಾಜಕೀಯದಲ್ಲಿ ಬೆಳವಣಿಗೆ ಆಗಬಹುದು ಎಂದು ಹೇಳಿದ್ದಾರೆ ಅಷ್ಟೆ. ಇಂತಹದ್ದೆ ಆಗುತ್ತದೆ ಎಂದು ಅವರು ಹೇಳಿಲ್ಲ. ನೀವೆಲ್ಲಾ ಏನೇನೋ ಊಹೆ ಮಾಡಿಕೊಂಡು ವರದಿ ಮಾಡುವುದು ಸರಿಯಲ್ಲ ಎಂದರು.ರಾಜಣ್ಣ ಅವರ ಹೇಳಿಕೆಯನ್ನು ವಿಶ್ಲೇಷಿಸಲು ನಾನು ಪತ್ರಕರ್ತನಲ್ಲ ಎಂದು ಹೇಳಿದ ಮುಖ್ಯಮಂತ್ರಿಗಳು, ರಾಜಣ್ಣ ಹೇಳಿಕೆಯನ್ನು ನಿರ್ಲಕ್ಷಿಸಿ ಎಂದರು.

ಸಚಿವ ರಾಜಣ್ಣ ಅವರ ಹೇಳಿಕೆಯನ್ನು ಹೇಗೆ ಅರ್ಥೈಸಿಕೊಳ್ಳಬೇಕು ಎಂಬ ಪ್ರಶ್ನೆಗೂ ಮುಖ್ಯಮಂತ್ರಿಗಳು ರಾಜಣ್ಣ ಅವರ ಹೇಳಿಕೆ ನಿರ್ಲಕ್ಷಿಸಲು ಸೂಕ್ತವಾಗಿದೆ. ಅದನ್ನು ನಿರ್ಲಕ್ಷಿಸುವುದೇ ಒಳ್ಳೆಯದು ಎಂದು ಪುನರುಚ್ಚರಿಸಿದರು.ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಾಂಗ್ರೆಸ್ ಶಾಸಕರುಗಳೇ ಅಸಮಾಧಾನ, ಅತೃಪ್ತಿ ವ್ಯಕ್ತಪಡಿಸಿದ್ದರು. ನಂತರ ನಿನ್ನೆ ಸಚಿವ ರಾಜಣ್ಣ ಅವರು ಸೆಪ್ಟೆಂಬರ್‌ನಲ್ಲಿ ರಾಜ್ಯದಲ್ಲಿ ರಾಜಕೀಯ ಕ್ರಾಂತಿ ಆಗುತ್ತದೆ ಎಂದು ಹೇಳಿಕೆ ನೀಡಿದ್ದು ಸುದ್ದಿಗೆ ಗ್ರಾಸವಾಗಿ, ನಾನಾ ಚರ್ಚೆಗಳಿಗೆ ಎಡೆ ಮಾಡಿತ್ತು.

ಈ ಬಗ್ಗೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಪಷ್ಟನೆ ನೀಡವ ಮೂಲಕ ಯಾವ ಬೆಳವಣಿಗೆಗಾಳಬೇಕು ಎಂಬುದುನ್ನು ರಾಜಣ್ಣ ಹೇಳಿಲ್ಲ. ಅದನ್ನು ನಿರ್ಲಕ್ಷಿಸಿ. ರಾಜಣ್ಣ ಅವರ ಹೇಳಿಕೆಗಳ ಬಗೆಗಿನ ಚರ್ಚೆಗಳಿಗೆ ತೆರೆ ಎಳೆಯುವ ಯತ್ನ ನಡೆಸಿ, ರಾಜಣ್ಣ ಹೇಳಿಕೆಯನ್ನು ನಿರ್ಲಕ್ಷಿಸಿ ಎಂದು 2–3 ಬಾರಿ ಪುನರುಚ್ಚರಿಸಿದರು.ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರುಗಳಾದ ಡಾ.ಹೆಚ್.ಸಿ. ಮಹದೇವಪ್ಪ, ಶಿವರಾಜ್ ತಂಗಡಗಿ ಮತ್ತಿತರರು ಮುಖ್ಯಮಂತ್ರಿಗಳ ಜತೆ ಇದ್ದರು.

**ಜಿಲ್ಲಾವಾರು ಶಾಸಕರ ಸಭೆಗೆ ಚಿಂತನೆ–**ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಸ್ವಪಕ್ಷೀಯ ಶಾಸಕರುಗಳೇ ಅಸಮಾಧಾನ, ಅತೃಪ್ತಿಯನ್ನು ಬಹಿರಂಗವಾಗಿ ವ್ಯಕ್ತಪಡಿಸಿ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಸಿಗುತ್ತಿಲ್ಲ. ಅನುದಾನ ಮತ್ತು ಬಡವರಿಗೆ ಮನೆಗಳನ್ನು ಪಡೆಯಲು ಹಣ ನೀಡಬೇಕು ಎಂದು ಹೇಳಿಕೆ ನೀಡಿರುವ ಬೆನ್ನಲ್ಲೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಶಾಸಕರ ಅತೃಪ್ತಿ, ಅಸಮಾಧಾನ ಶಮನಕ್ಕೆ ಮುಂದಾಗಿದ್ದು ಜಿಲ್ಲಾವಾರು ಶಾಸಕರ ಸಭೆ ಕರೆದು ಅಹವಾಲು ಆಲಿಸಲು ಮುಂದಾಗಿದ್ದಾರೆ.



ಕಾಂಗ್ರೆಸ್ ಶಾಸಕರಲ್ಲಿನ ಅತೃಪ್ತಿ, ಅಸಮಾಧಾನ ಸರಿಪಡಿಸಿ. ಯಾವುದೇ ಶಾಸಕರು ಬಹಿರಂಗವಾಗಿ ರಾಜ್ಯ ಸರ್ಕಾರದ ವಿರದ್ಧ ಹೇಳಿಕೆ ನೀಡುವುದಕ್ಕೆ ಕಡಿವಾಣ ಹಾಕಿ ಎಂದು ಕಾಂಗ್ರೆಸ್ ಹೈಕಮಾಂಡ್ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಜಿಲ್ಲಾವಾರು ಕಾಂಗ್ರೆಸ್ ಶಾಸಕರನ್ನು ಕರೆದು ಅವರ ಜತೆ ಸಭೆ ನಡೆಸಿ ಅವರ ಸಮಸ್ಯೆಗಳನ್ನು ಚರ್ಚಿಸುವ ತೀರ್ಮಾನ ತೆಗೆದುಕೊಂಡಿದ್ದಾರೆ ಎಂದು ಮುಖ್ಯಮಂತ್ರಿಗಳ ಆಪ್ತ ಮೂಲಗಳು ಹೇಳಿವೆ.

ಬರುವ ಜುಲೈ 1 ರಿಂದ ಬೆಂಗಳೂರಿಲ್ಲಿ ಜಿಲ್ಲಾವಾರು ಶಾಸಕರ ಸಭೆ ಕರೆದು ಅವರ ಸಮಸ್ಯೆಗಳನ್ನು ಚರ್ಚಿಸಿ ಸಮಸ್ಯೆಗಳಿಗೆ ಮದ್ದು ಅರೆಯುವ ಕೆಲಸ ಮಾಡಲಿದ್ದಾರೆ.ಜಿಲ್ಲಾವಾರು ಶಾಸಕರ ಸಭೆಯ ಸಂದರ್ಭದಲ್ಲಿ ಆಯಾ ಜಿಲ್ಲೆಗಳ ಉಸ್ತುವಾರಿ ಸಚಿವರನ್ನೂ ಕರೆದು ಶಾಸಕರ ಕೆಲಸ ಮಾಡಿಕೊಡುವಂತೆ ಮುಖ್ಯಮಂತ್ರಿಗಳು ತಾಕೀತು ಮಾಡುವರು ಎಂದು ಹೇಳಲಾಗಿದೆ.ವಸತಿ ಇಲಾಖೆಯಲ್ಲಿ ಮನೆಗಳನ್ನು ಪಡೆಯಲು ಹಣ ನೀಡಬೇಕು ಎಂದು ಕಾಂಗ್ರೆಸ್‌ನ ಹಿರಿಯ ಶಾಸಕ ಬಿ.ಆರ್. ಪಾಟೀಲ್ ಕೆಲ ದಿನಗಳ ಹಿಂದೆ ಹೇಳಿಕೆ ನೀಡಿದ್ದರು. ಇವರ ಜತೆಗೆ ಶಾಸಕರುಗಳಾದ ರಾಜು ಕಾಗೆ, ಎನ್.ವೈ. ಗೋಪಾಲಕೃಷ್ಣ ಇವರುಗಳು ಸಹ ಕಾಂಗ್ರೆಸ್ ಸರ್ಕಾರದಲ್ಲಿ ಅನುದಾನ ಸಿಗುತ್ತಿಲ್ಲ, ಅಧಿಕಾರಿಗಳು ನಮ್ಮ ಮಾತು ಕೇಳುತ್ತಿಲ್ಲ.

ಪಾಟೀಲ್ ಅವರು ಹೇಳಿರುವುದು ಸತ್ಯವಿದೆ ಎಂದು ಬಹಿಂರಗವಾಗಿ ಹೇಳಿಕೆ ನೀಡಿದ್ದರು.ಈ ಹೇಳಿಕೆಗಳು ಸರ್ಕಾರಕ್ಕೆ ಮುಜುಗರ ತಂದಿದ್ದು. ಪಕ್ಷದ ಹೈಕಮಾಂಡ್ ಸಹ ಶಾಸಕರ ಈ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ಶಾಸಕರ ಸಮಸ್ಯೆಗಳನ್ನು ಆಲಿಸಿ ಎಂದು ಸೂಚನೆ ನೀಡಿತ್ತು.ಇದಾದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿ ಪ್ರವಾಸದಿಂದ ವಾಪಸ್ಸಾದ ತಕ್ಷಣವೇ ಶಾಸಕರಾದ ಬಿ.ಆರ್. ಪಾಟೀಲ್, ರಾಜು ಕಾಗೆ ಇವರುಗಳನ್ನು ತಮ್ಮ ಮನೆಗೆ ಕರೆಸಿಕೊಂಡು ಮಾತನಾಡಿ ಅವರ ಸಮಸ್ಯೆಗಳನ್ನು ಆಲಿಸಿ, ಸಮಾಧಾನಪಡಿಸಿದ್ದರು .ಈಗ ಜಿಲ್ಲಾವಾರು ಶಾಸಕರ ಸಭೆ ಕರೆದು ಶಾಸಕರ ಅಹವಾಲುಗಳನ್ನು ಆಲಿಸಲು ನಿರ್ಧರಿಸಿದ್ದಾರೆ.ಜುಲೈ 1 ರಿಂದ ಪ್ರತಿದಿನ ಒಂದು ಜಿಲ್ಲೆಯ ಶಾಸಕರ ಸಭೆಗಳು ಬೆಂಗಳೂರಿನ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ನಡೆಯಲಿದೆ.

ಯುವ ಮಾರ್ಗ



## ಬಾಲ ಕಾರ್ಮಿಕ ಪದ್ಧತಿ ತಡೆ ಹಿನ್ನೆಲೆಯಲ್ಲಿ ಆಟೋ ಪ್ರಚಾರದ ಜನಜಾಗೃತಿ


**ರಾಯಚೂರು,ಜೂ.27–** ಸಿಂಧನೂರ ತಾಲೂಕಿನಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕತೆ ನಿರ್ಮೂಲನೆ ಕುರಿತು ಜನಜಾಗೃತಿ ಮೂಡಿಸಲು ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಉಪಯೋಜನೆಯಡಿ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆಯಡಿ ಆಟೋ ಪ್ರಚಾರದ ಜನಜಾಗೃತಿ ಸಂಚಾರಿ ವಾಹನಕ್ಕೆ ಸಿಂಧನೂರಿನ ಗೌರವಾನ್ವಿತ ಸಿವಿಲ್ ಪ್ರಧಾನ ನ್ಯಾಯಾಧೀಶರಾದ ಶ್ರೀಮತಿ ರೂಪ ಸಿ ವಗ್ಗ ಅವರು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಸಹಕಾರ ನೀಡಬೇಕು. ಶಿಕ್ಷಣದಿಂದ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ಈ ಸಂಚಾರಿ ಜನಜಾಗೃತಿ ವಾಹನವು ಎಸ್.ಸಿ ಮತ್ತು ಎಸ್.ಟಿ ಜನಾಂಗದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ತಾಲೂಕಿನಾದ್ಯಂತ ಎರಡು ದಿನಗಳ ಕಾಲ ಸಂಚರಿಸಲಿದೆ. ಈ ವೇಳೆ ಕರಪತ್ರಗಳನ್ನು ಹಂಚುವುದರ ಮತ್ತು ಸ್ಟೀಕರಗಳನ್ನು ಅಂಟಿಸುವ ಮುಖಾಂತರ ಜಾಗೃತಿ ಮೂಡಿಸಲಾಗುತ್ತದೆ. ಮಕ್ಕಳನ್ನು ಕೆಲಸಕ್ಕೆ ಕಳುಹಿಸದೇ ಶಾಲೆಗೆ ಕಳುಹಿಸಬೇಕೆಂದು ಜನರಿಗೆ ತಿಳಿವಳಿಕೆ ಮೂಡಿಸಲಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಸಿಂಧನೂರಿನ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಸರಸ್ವತಿ ಒಟೆಕರ್, ಸಿಂಧನೂರು ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಎನ್. ರಾಮನಗೌಡ, ವಕೀಲರಾದ ಉರುಕುಂದಪ್ಪ ಎಸ್.ಹೆಚ್.ಪಿ ಖಾದ್ರಿ, ಯು. ಬಸವಂತರಾವ್ ವಕೀಲರು, ಹನುಮಂತಪ್ಪ ಸೇರಿದಂತೆ ಕಾರ್ಮಿಕ ಇಲಾಖೆ ಸಿಬ್ಬಂದಿ ಇದ್ದರು.

## ಮೈದುಂಬಿದ ಕೆಆರ್‌ಎಸ್ ಜಲಾಶಯ, ಇಂದು ಸಿಎಂ ಬಾಗಿನ ಅರ್ಪಣೆ



**ಮಂಡ್ಯ, ಜೂ.27–** ಮತ್ತೆ ಮಳೆ ಅಬ್ಬರ ಜೋರಾದ ಹಿನ್ನೆಲೆಯಲ್ಲಿ ಕೃಷ್ಣರಾಜಸಾಗರ ಅಣೆ ಕಟ್ಟಿನ ಶೇಕಡಾ 90ರಷ್ಟು ನೀರು ಭರ್ತಿಯಾಗಿದೆ. ಒಳಹರಿವು ನಿರಂತರವಾಗಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅಪಾರ ಪ್ರಮಾಣದ ನೀರನ್ನು ನಿನ್ನ ಸಂಜೆ ಅಣೆಕಟ್ಟಿನಿಂದ ನದಿಗೆ ಬಿಡುಗಡೆ ಮಾಡಲಾಗಿದೆ. ಮುಂಜಾಗ್ರತಾ ದೃಷ್ಟಿಯಿಂದ ಕಾವೇರಿ ನದಿಗೆ 50,000 ಕ್ಯೂಸೆಕ್‌ಗೂ ಹೆಚ್ಚು ನೀರನ್ನು ಬಿಡುಗಡೆ ಮಾಡಲಾಗಿದೆ ಎಂದು ಕಾವೇರಿ ನೀರಾವರಿ ನಿಗಮ ತಿಳಿಸಿದೆ.

ಮಂಡ್ಯ, ಮೈಸೂರು, ಮಡಿಕೇರಿ, ಕೊಡಗು ಹಾಗೂ ಕಾವೇರಿ ಜಲಾನಯನ ಪ್ರದೇಶಗಳ ಸುತ್ತಮುತ್ತಲಿನ ಭಾಗದಲ್ಲಿ ವ್ಯಾಪಕ ಮಳೆ ಮುಂದುವರಿದೆ. ಹೀಗಾಗಿ ಹೆಚ್ಚುವರಿ ಗೇಟ್‌ಗಳನ್ನು ತೆರೆದು ನೀರು ನದಿ ಹಾಗೂ ಕಾಲುವೆಗೆ ಬಿಡುಗಡೆ ಮಾಡಲಾಗಿದೆ. ನದಿ ಪಾತ್ರದ ಜನರಿಗೆ ಪ್ರವಾಹ ಎಚ್ಚರಿಕೆ ನೀಡಲಾಗಿದೆ. ಸುರಕ್ಷಿತ ಸ್ಥಳಕ್ಕೆ ತೆರಲುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

**84 ವರ್ಷಗಳ ನಂತರ ಜೂನ್‌ನಲ್ಲಿ ಡ್ಯಾಂ ಗೇಟ್ ಓಪನ್:**

ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕ ನಂತರ ಅಂದರೆ ಒಟ್ಟು 84 ವರ್ಷಗಳ ನಂತರ ಮೊದಲ ಬಾರಿಗೆ, ಜೂನ್ 23 ರಂದು ಅಣೆಕಟ್ಟಿನ ಕ್ರೆಸ್ಟ್ ಗೇಟ್‌ಗಳನ್ನು ತೆರೆದು ನೀರು ಬಿಡುಗಡೆ ಮಾಡಲಾಗಿದೆ.

ಹಿಂದೆ ಜೂನ್‌ನಲ್ಲಿ ಮಳೆ ಆರಂಭವಾದರೆ, ನಂತರದ ತಿಂಗಳುಗಳಲ್ಲಿ ಹೆಚ್ಚಿನ ಮಳೆ ಆಗಿ ಡ್ಯಾಂ ತುಂಬುತ್ತಿತ್ತು. ಆನಂತರವೇ ಕೆಆರ್‌ಎಸ್ ಡ್ಯಾಂ ಗೇಟ್ (ಜುಲೈ, ಆಗಸ್ಟ್, ಸೆಪ್ಟಂಬರ್ ವೇಳೆಗೆ) ಓಪನ್ ಮಾಡುತ್ತಿದ್ದೇವೆ. ಇದೀಗ ಭಾರಿ ಮಳೆಗೆ ಋತುವಿನ ಆರಂಭದ ಜೂನ್ ತಿಂಗಳಲ್ಲೇ ಡ್ಯಾಂ ಭರ್ತಿಯಾಗಿದ್ದರಿಂದ ಈ ತಿಂಗಳಲ್ಲೇ ಡ್ಯಾಂ ನಿಂದ ಮೊದಲ ಬಾರಿ ನೀರು ಬಿಡಲಾಗುತ್ತಿದೆ ಎಂದು ಇಲಾಖೆ ಮೂಲಗಳು ಮಾಹಿತಿ ನೀಡಿದೆ.

**ಸಿಎಂ ಬಾಗಿನ:**

ರೈತರ ಜೀವನಾಡಿಯಾಗಿರುವ ಕಾವೇರಿ ನದಿಯ ಪ್ರಮುಖ ಅಣೆಕಟ್ಟೆಯಾಗಿರುವ ಕೆಆರ್‌ಎಸ್ ಇದೇ ಮೊದಲ ಬಾರಿಗೆ ಜೂನ್ ತಿಂಗಳಲ್ಲಿ ತುಂಬಿರುವ ಹಿನ್ನೆಲೆಯಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ಮಾತೆಗೆ ಬಾಗಿನ ಅರ್ಪಿಸಲಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಜ ಸ್ವಾಮಿ ಸೇರಿದಂತೆ ಶಾಸಕರು, ವಿಧಾನಪರಿಷತ್ ಸದಸ್ಯರು ಸೇರಿದಂತೆ ಹಲವು ಗಣ್ಯರು ಭಾಗಿಯಾಗಲಿದ್ದಾರೆ.ಈಗಾಗಲೇ ಕೆಆರ್‌ಎಸ್ ಬಳಿ ಬಿಗಿ ಭದ್ರತೆಯನ್ನು ಕಲ್ಪಿಸುವುದರ ಜೊತೆಗೆ ವಿಶೇಷ ಸಮಾರಂಭಕ್ಕೆ ಈಗಾಗಲೇ ಭರ್ಜರಿ ತಯಾರಿ ನಡೆದಿದೆ.

# ವಿವಿಧ ಗ್ರಾಮ ಪಂಚಾಯಿತಿಗಳ ಪ್ರಗತಿ ಪರಿಶೀಲನೆ ಸಭೆ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಜೂ.27–** ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣ ದಲ್ಲಿ ನಡೆದ ತಾಲೂಕಿನ ವಿವಿಧ ಗ್ರಾಮಪಂಚಾಯಿತಿಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ತಾ.ಪಂ. ಇ.ಓ. ಖಾಲೀದ್ ಅಹಮ್ಮದ್ ಮಾತನಾಡಿ ತಾಲೂಕಿನ ಎಲ್ಲಾ 17 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೂಲಿ ಕಾರ್ಮಿಕರಿಂದ ನಮೂನೆ–06ರಲ್ಲಿ ಅರ್ಜಿ ಸ್ವೀಕರಿಸಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೂಲಿ ಕೇಲಸ ನೀಡಬೇಕು ಹಾಗೂ ಕೇಲಸದ ಸ್ಥಳದಲ್ಲಿ ಪ್ರತಿದಿನ ಎರಡು ಬಾರಿ ಎನ್.ಎಂ.ಎಂ.ಎಸ್ ಹಾಜರಾತಿಯನ್ನು ಕಡ್ಡಾಯವಾಗಿ ಗ್ರಾಮ ಪಂಚಾಯತ್ ಸಿಬ್ಬಂದಿಗಳ ಮೂಲಕ ಪಡೆಯಬೇಕು ಹಾಗೂ ಕೂಲಿ ಕಾಮಿರ್ಕರಿಗೆ ಅಗತ್ಯವಾದ ಕುಡಿಯುವ ನೀರಿನ ವ್ಯವಸ್ಥೆ,ನೆರಳಿನ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ವಸತಿ ಇಲ್ಲದೆ ಇರುವ ಕುಟುಂಬಗಳಿಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ ಮೇ 31 ರವರಿಗೆ ಅವಕಾಶ ಮಾಡಿಕೊಡಲಾಗಿತ್ತು ಎಷ್ಟು ವಸತಿ ರಹಿತ ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿರುವ ಬಗ್ಗೆ ಸರ್ವೆ ನಡೆಸಿರುವ ಕುರಿತು ಮಾಹಿತಿ ಪಡೆದರು. ಗ್ರಾಮ ಪಂಚಾಯಿತಿ ವತಿಯಿಂದ 2025–26 ನೇ ಸಾಲಿನ ಬೇಡಿಕೆಗೆ ಅನುಗುಣವಾಗಿ ಕರ ವಸೂಲಿ ಮಾಡಿರುವ ಬಗ್ಗೆ ಕರ ವಸುಲಿಗಾರರಿಂದ ಮಾಹಿತಿ ಪಡೆದರು

ಸಭೆಯಲ್ಲಿ ತಾ.ಪಂ. ಸಹಾಯಕ ನಿರ್ದೇಶಕರಾದ ದೀಪ ಅರಳಿಕಟ್ಟಿ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾ.ಪಂ.ಗ್ರೇಡ್ –1 ಹಾಗೂ ಗ್ರೇಡ್ –2 ಕಾರ್ಯದರ್ಶಿಗಳು, ಗ್ರಾಮ ಪಂಚಾಯತಿ ದರ್ಜೆ ಲೆಕ್ಕ ಸಹಾಯಕರು, ನರೇಗಾ ಸಿಬ್ಬಂದಿಗಳು, ತಾಂತ್ರಿಕ ಸಹಾಯಕರು, ಡಿ .ಇ .ಓ, ಕರ ವಸೂಲಿಗಾರರು ಸೇರಿದಂತೆ ಇನ್ನಿತರ ಗ್ರಾಮ ಪಂಚಾಯಿತಿಗಳ ಸಿಬ್ಬಂದಿಗಳು ಹಾಜರಿದ್ದರು,

# ನೇತಾಜಿ ನಗರದ ಮಹಿಳೆ ಕಾಣೆ: ಪತ್ತೆಗೆ ಪೊಲೀಸರ ಮನವಿ

**ಯುವ ಮಾರ್ಗ ಸುದ್ದಿ**



**ರಾಯಚೂರು,ಜೂ.27–** ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ನಿವಾಸಿ ರೇಣುಕಾ ಬುಜ್ಜಪ್ಪ (32) ಎಂಬ ಮಹಿಳೆಯು ಜೂನ್ 18ರ ಬೆಳಿಗ್ಗೆ 8.30ಕ್ಕೆ ಮನೆಯಿಂದ ಹೊರಗಡೆ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ. 70/2025 ಕಲಂರಡಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ಮಹಿಳೆಗೆ ಮಗ ರಾಕೇಶ್ (13) ತಂಗಿ ಮಲ್ಲಮ್ಮ (30) ಸೇರಿದಂತೆ ಒಟ್ಟು 5 ಜನ ವಾಸವಾಗಿದ್ದು, ತನ್ನ ಆಧಾರ್ ಕಾರ್ಡ, ಬ್ಯಾಂಕ್ ಪಾಸ್ ಬುಕ್, ಎಟಿಎಮ್ ಕಾರ್ಡ ತೆಗೆದುಕೊಂಡು ಹೋಗಿರುತ್ತಾಳೆ.

**ಮಹಿಳೆಯ ಚಹರೆ ಪಟ್ಟಿ:** ಎತ್ತರ 5.0 ಫೀಟ್, ದುಂಡು ಮುಖ, ಸದೃಢ ಮೈ ಕಟ್ಟು, ಸಾದ ಕೆಂಪು ಬಣ್ಣ, ಕಪ್ಪು ಬಣ್ಣದ ಕೂದಲು, ನೀಲಿ ಬಣ್ಣದ ಸೀರೆ, ಬಿಳಿ ಬಣ್ಣದ ಕುಪ್ಪಸ ಉಡುಪುಗಳನ್ನು ಧರಿಸಲಾಗಿದ್ದು, ಕನ್ನಡ ಹಾಗೂ ತೆಲುಗು ಭಾಷೆ ಮಾತನಾಡುತ್ತಾಳೆ.

ಈ ಮಹಿಳೆಯ ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532–240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ: 08532–235635, 08532–235100, 9480803800 ಅಥವಾ ಪಿ.ಎಸ್.ಐ (ಕಾ.ಸು) 9480803846 ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು 9480803831ಗೆ ಸಂಪರ್ಕಿಸಬಹುದಾಗಿದೆ. ಮಾಹಿತಿ ನೀಡಿದವರಿಗೆ ಪೊಲೀಸ್ ಇಲಾಖೆಯಿಂದ ಸೂಕ್ತ ಬಹುಮಾನ ನೀಡಲಾಗುವುದು ಎಂದು ನೇತಾಜಿ ನಗರ ಪೊಲೀಸ್ ಠಾಣೆಯ ಪಿ.ಎಸ್.ಐ ಲಕ್ಷ್ಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದಿನಿಂದ ರಾಜ್ಯಮಟ್ಟದ ಕರೋಕೆ ಗಾಯನ ಸ್ಪರ್ಧೆ : ಬದ್ರಿನಾರಾಯಣ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಜೂ.27–** ಎಲ್.ಎಸ್ ಮೆಲೋಡಿ ಸ್‌ನಿಂದ ಲಿಂಗಸುಗೂರು ಪಟ್ಟಣದಲ್ಲಿ ರಾಜ್ಯಮಟ್ಟದ ಕರೋಕೆ ಗಾಯನ ಸ್ಪರ್ಧೆ ಏರ್ಪಡಿಸಲಾಗಿದೆ. ಆಸಕ್ತರು ಇದೇ 28, 29ರಂದು ಎರಡು ದಿನಗಳ ಕಾಲ ನಡೆಯುವ ಗಾಯನ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬೇಕೆಂದು ಬದ್ರಿ ನಾರಾಯಣ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಅನೇಕ ಪ್ರತಿಭೆಗಳು ಇವೆ. ಇದನ್ನು ಮನಗಂಡು ಪಟ್ಟಣದಲ್ಲಿ ಇದೇ 28, 29ರಂದು ಎರಡು ದಿನಗಳ ಕಾಲ ರಾಜ್ಯಮಟ್ಟದ ಕರೋಕೆ ಗಾಯನ ಸ್ಪರ್ಧೆ ಏರ್ಪಡಿಸಲಾಗಿದೆ. ಲಿಂಗಸುಗೂರು ಪಟ್ಟಣದ ಎಲ್.ನ್ ಸಿಂಗಿಂಗ್ ಸ್ಟೂಡಿಯೋ ಹಾಗೂ ಸಾನ್ವಿ ಸಿಂಗಿಂಗ ಸ್ಟೂಡಿಯೊಗಳಲ್ಲಿ ಸ್ಪರ್ಧೆ ನಡೆಯಲಿದೆ. 8 ವರ್ಷ ಮೇಲ್ಪಟ್ಟ ಆಸಕ್ತರು ಅಂದು ಬೆಳಗಿನ 9 ಗಂಟೆಯಿಂದ ಅಡಿಷನ್‌ನಲ್ಲಿ ಪಾಲ್ಗೊಳಬೇಕು ಹೆಚ್ಚಿನ ಮಾಹಿತಿಗಾಗಿ 72595 77434, 98459 15243 ಮೊಬೈಲ್ ನಂಬರ್‌ಗಳಿಗೆ ಸಂಪರ್ಕಿಸಲು ಕೋರಿದ್ದಾರೆ.

ಕರೋಕೆ ಗಾಯನ ಸ್ಪರ್ಧೆಯಲ್ಲಿ ಸ್ಪರ್ಧೆ ಮಾಡಿ ಗೆದ್ದವರಿಗೆ ಪ್ರಥಮ ಬಹುಮಾನ 30,000, ದ್ವಿತಿಯ 15,000, ತೃತೀಯ ಬಹುಮಾನ 7500 ರೂಪಾಯಿ ಇರುತ್ತದೆ. ಎಂದು ಹೇಳಿದರು.

ಈ ಸಂದರ್ಭದಲ್ಲಿ ಖ್ಯಾತ ನಾಟಕ ರಚನೆಕಾರ ರಂಜಾನ್‌ಸಾಬ ಉಳ್ಳಾಗಡ್ಡಿ, ಅರುಣ ಕುಮಾರ, ಶರಣಬಸವ, ಸಂತೋಷ ಇದ್ದರು.

## ಮಾದಕ ದ್ರವ್ಯ ದುರುಪಯೋಗ, ಅಕ್ರಮ ಸಾಗಣೆ ವಿರೋಧಿ ದಿನ ಆಚರಣೆ

**ಕಲಬುರಗಿ, ಜೂ.27–** ವಿಶ್ವ ಮಾದಕ ದ್ರವ್ಯ ದಿನ ಎಂದು ಕರೆಯಲ್ಪಡುವ ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಸಂದರ್ಭದಲ್ಲಿ, ಎಚ್.ಕೆ.ಇ. ಸೊಸೈಟಿಯ ಮಹಾದೇವಪ್ಪ ರಾಂಪುರೆ ವೈದ್ಯಕೀಯ ಕಾಲೇಜು , ಕಲಬುರಗಿ ನಗರ ಪೊಲೀಸ್ ಮತ್ತು ಕಲಬುರಗಿ ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ, ಮಾದಕ ದ್ರವ್ಯ ದುರುಪಯೋಗದ ಅಪಾಯಗಳು ಮತ್ತು ತಡೆಗಟ್ಟುವ ಕ್ರಮಗಳ ಮಹತ್ವದ ಬಗ್ಗೆ ಜ್ಞಾನವನ್ನು ಹರಡಲು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿತು.



ಕಾರ್ಯಕ್ರಮವು ಎಂಆರ್‌ಎಂಸಿ ಯ ಉಪನ್ಯಾಸ ಸಭಾಂಗಣ ಸಂಖ್ಯೆ 2 ರಲ್ಲಿ ನಡೆಯಿತು.ಎಂಆರ್‌ಎಂಸಿ ಡೀನ್ ಡಾ. ಶರಣಗೌಡ ಪಾಟೀಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಡಾ. ಸುನಿಲ್ ದೇಶಮುಖ್ ,ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಡಿ,ಐಪಿಎಸ್ ಸುಬೇದಾರ್ ಮತ್ತು ಡಾ. ವಿನೋದ್ ವಿ. ವಾಲಿ ಅವರು ಸಹ ಹಾಜರಿದ್ದರು

## ಸಿಂಧನೂರು ನಗರಸಭೆ: ಪ್ರಧಾನಮಂತ್ರಿ ಆವಾಸ್ ಯೋಜನೆಗೆ ಅರ್ಜಿ ಆಹ್ವಾನ

**ರಾಯಚೂರು,ಜೂ.27–**ಜಿಲ್ಲೆಯ ಸಿಂಧನೂರು ನಗರಸಭೆ ವತಿಯಿಂದ ಭಾರತ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) 2.0 ಯೋಜನೆಯಡಿ ಸರ್ವರಿಗೂ ಸೂರು ಒದಗಿಸುವ ಉದ್ದೇಶದಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯಡಿಯಲ್ಲಿ ಫಲಾನುಭವಿಯು ವಿವಾಹಿತ ಮಹಿಳೆ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿಯಾಗಿರಬೇಕು. ಇವರನ್ನು ಹೊರತುಪಡಿಸಿ ಪುರುಷರಾಗಿದ್ದಲ್ಲಿ ಮಾಜಿ ಯೋಧರು, ವಿಧುರರು, ಅಂಗವಿಕಲರು, ಹಿರಿಯ ನಾಗರೀಕರು, ವಿಚ್ಛೇದಿತರು ಅರ್ಹರಾಗಿರುತ್ತಾರೆ. ಫಲಾನುಭವಿ ಕುಟುಂಬದ ವಾರ್ಷಿಕ ಆದಾಯ ಇಡ್ಲೂಎಸ್ 3 ಲಕ್ಷದೊಳಗೆ ಇರಬೇಕು. ಎಲ್‌ಐಜಿ 3 ರಿಂದ 6 ಲಕ್ಷದೊಳಗೆ, ಎಮ್‌ಐಜಿ 6 ರಿಂದ 9 ಲಕ್ಷದೊಳಗೆ ಇರಬೇಕು. ರಾಜ್ಯ ಮತ್ತು ಕೇಂದ್ರ ಸರ್ಕಾರದ ಬೇರೆ ಯಾವುದೇ ಯೋಜನೆ ಅಥವಾ ಇಲಾಖೆಯಿಂದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಆಯ್ಕೆಯಾಗಿ 20 ವರ್ಷದಿಂದ ವಸತಿ ಯೋಜನೆಯಡಿಯಲ್ಲಿ ಸಹಾಯಧನ ಪಡೆದು ಮನೆ ನಿರ್ಮಾಣ ಮಾಡಿಕೊಂಡಿರಬಾರದು.

ಫಲಾನುಭವಿಯು ಸ್ವಂತ ನಿವೇಶನ ಹೊಂದಿದ್ದಲ್ಲಿ ನಿವೇಶನಕ್ಕೆ ಸಂಬಂಧಿಸಿದಂತೆ ಹಕ್ಕುಪತ್ರ, ಕ್ರಯ ಪತ್ರ/ ದಾನ ಪತ್ರ/ ಉಡುಗೊರೆ ಪತ್ರ/ ಖಾತಾ ಪತ್ರಗಳನ್ನು ಹೊಂದಿರಬೇಕು. ಈ ಯೋಜನೆಯಡಿಯಲ್ಲಿ ಒಂಟಿ ಮಹಿಳೆಯರು, ತೃತೀಯ ಲಿಂಗಿಗಳು, ಎಸ್.ಸಿ/ ಎಸ್.ಟಿ/ ಹಿಂದುಳಿದ/ ಅಲ್ಪ ಸಂಖ್ಯಾತ ವರ್ಗದವರು, ಸ್ವಚ್ಛತಾ ಕಾರ್ಮಿಕರು, ಪಿಎಂ ಸ್ವನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳು ಮತ್ತು ಪ್ರಧಾನ ಮಂತ್ರಿ ವಿಶ್ವ ಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕಾ ಕಾರ್ಮಿಕರು ಯೋಜನೆಗೆ ಅರ್ಹ ಇರುತ್ತಾರೆ.

ದಾಖಲಾತಿಗಳು: ಆಧಾರ್ ಕಾರ್ಡ್ (ಮನೆಯ ಯಜಮಾನಿ/ ಹಾಗೂ ತಂದೆ/ ತಾಯಿ ಮತ್ತು ಪಡಿತರ ಚೀಟಿಯಲ್ಲಿ ಇರುವಂತಹ ಕುಟುಂಬ ಸದಸ್ಯರ ಆಧಾರ್ ಕಾರ್ಡಗಳು), ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು ಹಕ್ಕುಪತ್ರ/ ಕ್ರಯ ಪತ್ರ/ ದಾನ ಪತ್ರ/ ಉಡುಗೊರೆ ಪತ್ರ/ ಖಾತ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಖಾತೆಯ ವಿವರ, ನಿಗಧಿತ ನಮೂನೆ, ಮೊಬೈಲ್ ಸಂಖ್ಯೆ, ಪ್ಯಾನ್ ಕಾರ್ಡ್ನೊಂದಿಗೆ ವೆಬ್‌ಸೈಟ್ ವಿಳಾಸ: URL:http://pmay-urban.gov.in ನಲ್ಲಿ ಜುಲೈ 15 ರೊಳಗಾಗಿ ಅರ್ಜಿಸಲ್ಲಿಸಿ, ಅರ್ಜಿಯ ಪ್ರತಿಯನ್ನು ಈ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಅವಧಿ ಮೀರಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಬಂಧಪಟ್ಟ ವಿಷಯ ನಿರ್ವಾಹಕರನ್ನು ಸಂಪರ್ಕಿಸುವಂತೆ ಸಿಂಧನೂರು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿ.ಎಮ್‌ಶ್ರೀ ಜವಾಹರ ನವೋದಯ: 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜೂ.27–**ಜಿಲ್ಲೆಯ ಲಿಂಗಸುಗೂರು ತಾಲೂಕಿನ ಕನ್ನಾಪೂರ ಹಟ್ಟಿಯ ಪಿ.ಎಮ್‌ಶ್ರೀ ಜವಾಹರ ನವೋದಯ ವಿದ್ಯಾಲಯದಿಂದ 2026–27ನೇ ಸಾಲಿನ 6ನೇ ತರಗತಿ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ವಿದ್ಯಾಲಯದ ಪ್ರಾಚಾರ್ಯರು ತಿಳಿಸಿದ್ದಾರೆ.

ವಿದ್ಯಾಲಯದದಲ್ಲಿ ಎನ್‌ಇಪಿ 2020ರ ಆದರಿತ ಶಿಕ್ಷಣ ವ್ಯವಸ್ಥೆ, ಬಾಲಕ, ಬಾಲಕಿಯರಿಗೆ ಪ್ರತ್ಯೇಕ ಉಚಿತ ಊಟ ಮತ್ತು ವಸತಿ ವ್ಯವಸ್ಥೆ, ಅನುಭವಿ ಮತ್ತು ನುರಿತ ಸಿಬ್ಬಂದಿ, ಅಂತರ್ಜಾಲ, ಎಜುಸ್ಯಾಟ್ ಸೌಲಭ್ಯ, ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವ ವಿಕಸನಕ್ಕಾಗಿ ಸಹಪಠ್ಯ ಚಟುವಟಿಕೆ, ಕ್ರೀಡೆ ಮತ್ತು ಆಟೋಟ, ಯೋಗ ತರಬೇತಿಗೆ ವಿಶೇಷ ಪ್ರೋತ್ಸಾಹ ನೀಡಲಾಗುವುದು.

ಅರ್ಹತೆ: ಅರ್ಜಿ ತುಂಬುವ ವಿದ್ಯಾರ್ಥಿಗಳು 2025–26ನೇ ಸಾಲಿನಲ್ಲಿ 5 ನೇ ತರಗತಿ ರಾಯಚೂರು ಜಿಲ್ಲೆಯಲ್ಲಿ ಓದುತ್ತಿರಬೇಕು. ಪ್ರವೇಶ ಪಡೆಯ ಬಯಸುವ ಅಭ್ಯರ್ಥಿಯು ದಿನಾಂಕ: 01–05–2014ಕ್ಕಿಂತ ಮೊದಲು ಮತ್ತು ದಿನಾಂಕ 31–07–2016 ನಂತರ ಜನಿಸಿರಬಾರದು. ಸರಕಾರದ ಮಾನ್ಯತೆ ಪಡೆದ ಯಾವುದೇ ಶಾಲೆಯಲ್ಲಿ 3, 4ನೇ ತರಗತಿ ಉತ್ತೀರ್ಣನಾಗಿದ್ದು, 5ನೇ ತರಗತಿಯಲ್ಲಿ ಓದುತ್ತಿರಬೇಕು. 2025–26ನೇ ಸಾಲಿನಲ್ಲಿ ದಿನಾಂಕ: 31–07–20025ರ ಒಳಗಾಗಿ ಜಿಲ್ಲೆಯಲ್ಲಿ 5ನೇ ತರಗತಿ ಪ್ರವೇಶ ಪಡೆದಿರಬೇಕು.

ಅರ್ಜಿ ಸಲ್ಲಿಸುವುದು: ಜವಾಹರ ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆ 2026ರ ಅರ್ಜಿಯನ್ನು ಆನ್ ಲೈನ್ ಮುಖಾಂತರ ಸಲ್ಲಿಸತಕ್ಕದ್ದು. ಮುಖ್ಯೋಪಾಧ್ಯಾಯರು ನೀಡಿದ ಪ್ರಮಾಣ ಪತ್ರ. ಅಭ್ಯರ್ಥಿಯ ಭಾವಚಿತ್ರ

ಅಭ್ಯರ್ಥಿಯ ಸಹಿ ಮತ್ತು ಪಾಲಕರ ಸಹಿ, ಅಭ್ಯರ್ಥಿಯ ಆಧಾರ ಸಂಖ್ಯೆ, ಪಾಲಕರ ಮೊಬೈಲ್ ಸಂಖ್ಯೆ, ವಾಸಸ್ಥಳ ಪ್ರಮಾಣ ಪತ್ರದೊಂದಿಗೆ ಆಸಕ್ತರು ವೆಬ್‌ಸೈಟ್ ವಿಳಾಸ: www.navodaya.gov.in CxÀªÁ https://cbseitms.rcil.gov.in/nvs ನಲ್ಲಿ ಜುಲೈ 29ರೊಳಗಾಗಿ ಸಲ್ಲಿಸಬಹುದಾಗಿದೆ. ಪ್ರವೇಶ ಪರೀಕ್ಷೆಯನ್ನು ಡಿಸೆಂಬರ್ 13ರ ಬೆಳಿಗ್ಗೆ 11.30ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಮೊಬೈಲ್ ಸಂಖ್ಯೆ: 7204109046 ಅಥವಾ 7899009900ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಿ.ಎಮ್‌ಶ್ರೀ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**